# ಕನ್ನಡ ಪೋಸ್ಟ್

ಇದು ಸುದ್ದಿ ವಿಳಾಸ

ಸಂಪಾದಕ : ಮಂಜು ಬನವಾಸೆ

KANNADA POST

ಕನ್ನಡ ದಿನ ಪತ್ರಿಕೆ Kannada Daily

ಹಾಸನ E-mail : kannadapostnews@gmail.com / ಕನ್ನಡ post Price: ₹1

Vol.No.01 | Issue. 237 | Pages. 2 | Date: 01-08-2025, FRIDAY RNI NO: KARKAN/2024/89601

ಸಂಪುಟ : 01 - ಸಂಚಿಕೆ : 237 - ಪುಟಗಳು : 2 - 01-08-2025 ಶುಕ್ರವಾರ Ph: 8762954248 ದರ : ₹1


## ಭಾರತಮಾಲಾ ಯೋಜನೆ: ಭೂ ಪರಿಹಾರಕ್ಕೆ ಸಂಸದರ ಮನವಿ

### 674 ಎಕರೆ ಸ್ವಾಧೀನ, 330 ಕೋಟಿ ರೂ. ಬೇಕು | ಕಾಮಗಾರಿಗೆ ವೇಗ ನೀಡಲು ಕೋರಿಕೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಭಾರತಮಾಲಾ ಯೋಜನೆಯಡಿ ಕೈಗೊಂಡಿರುವ ಹಾಸನ-ಹುಳಿಯಾರು-ಹಿರಿಯೂರು ರಾಷ್ಟ್ರೀಯ ಹೆದ್ದಾರಿ 375ಕ್ಕೆ ಭೂಮಿ ನೀಡಿರುವ ರೈತರಿಗೆ ಪರಿಹಾರ ನೀಡಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಕೇಂದ್ರ ಸರ್ಕಾರಕ್ಕೆ ಮನವಿ ಸಲ್ಲಿಸಿದ್ದಾರೆ.

ನವದೆಹಲಿಯಲ್ಲಿರುವ ಅವರು ಗುರುವಾರ ರಾಷ್ಟ್ರೀಯ ಹೆದ್ದಾರಿ ಸಚಿವ ನಿತಿನ್ ಗಡ್ಕರಿ ಅವರನ್ನು ಭೇಟಿಯಾಗಿ ಮನವಿ ಸಲ್ಲಿಸಿದರು.

ದೇಶವ್ಯಾಪಿ ಸಂಪರ್ಕ ಕಲ್ಪಿಸುವ ಉದ್ದೇಶದಿಂದ ಕೇಂದ್ರ ಸರ್ಕಾರ 2017ರಲ್ಲಿ ಜಾರಿಗೊಳಿಸಿದ ಭಾರತಮಾಲಾ ಹೆದ್ದಾರಿ ಯೋಜನೆಯಡಿ ಹಾಸನ-ಹುಳಿಯಾರು-ಹಿರಿಯೂರು ರಾಷ್ಟ್ರೀಯ ಹೆದ್ದಾರಿ 375 ಸಹ ಸೇರಿಕೊಂಡಿದ್ದು ನಿರೀಕ್ಷಿತ ವೇಗದಲ್ಲಿ ಕಾಮಗಾರಿ ನಡೆಯದೆ ಹಾಗೂ ಸ್ವಾಧೀನಪಡಿಸಿಕೊಂಡ ಭೂಮಿಗೆ ಪರಿಹಾರ ಸಿಗದೆ ಸಾರ್ವಜನಿಕರ ಅಸಮಾಧಾನಕ್ಕೆ ಕಾರಣವಾಗಿದೆ. ಈ ರಸ್ತೆಯು ಪ್ರಮುಖ ಬಂದರುಗಳಾದ ಮಂಗಳೂರು ಮತ್ತು ಆಂಧ್ರಪ್ರದೇಶದ ವಿಶಾಖಪಟ್ಟಣಕ್ಕೆ ಸಂಪರ್ಕ ಕಲ್ಪಿಸುತ್ತದೆ. ಅದರಿಂದ ಸರಕು ಸಾಗಾಣಿಕೆ ವೆಚ್ಚ ಕಡಿಮೆಯಾಗಲಿದ್ದು ವಾಣಿಜ್ಯ ಚಟುವಟಿಕೆಗಳಿಗೆ ವರದಾನವಾಗಲಿದೆ. ಕೃಷಿ, ಪ್ರವಾಸೋದ್ಯಮ, ಶಿಕ್ಷಣ ಹಾಗೂ ಉದ್ಯೋಗ ಕ್ಷೇತ್ರಗಳಲ್ಲಿ ಉನ್ನತ ಬೆಳವಣಿಗೆಗೆ ಇದು ಪೂರಕವಾಗಿದೆ. ಅತ್ಯಂತ ಮಹತ್ವದ ಯೋಜನೆಗೆ ಕೇಂದ್ರ ಹಸಿರು ನಿಶಾನೆ ತೋರಿದೆಯಾದರೂ ಸ್ವಾಧೀನಪಡಿಸಿಕೊಂಡಿರುವ ಭೂಮಿಗೆ ಪರಿಹಾರ ನೀಡದೆ ಸತಾಯಿಸಲಾಗುತ್ತಿದೆ. 2017ರಲ್ಲಿ ಘೋಷಣೆಯಾದ ಕಾಮಗಾರಿ 2023ರಲ್ಲಿ ಅನುಷ್ಠಾನಕ್ಕೆ ಬಂದಿತು. ಎರಡು ವರ್ಷಗಳಲ್ಲಿ ಕಾಮಗಾರಿ ಪೂರ್ಣಗೊಳಿಸುವ ಗುರಿ ಹಾಕಿಕೊಳ್ಳಲಾಗಿತ್ತಾದರೂ ಆ ನಿಟ್ಟಿನಲ್ಲಿ ನಿರೀಕ್ಷಿತ ಪ್ರಗತಿ ಸಾಧ್ಯವಾಗಿಲ್ಲ.

#### 674 ಎಕರೆ ಜಮೀನು ಸ್ವಾಧೀನ

ಜಿಲ್ಲೆಯ ರಂಗನಾಥಪುರದಿಂದ ಚಿತ್ರದುರ್ಗದ ಕೆರೆಸೂರಗೊಂಡನಹಳ್ಳಿ ವರೆಗೆ ನಿಗದಿಪಡಿಸಲಾದ ಹೆದ್ದಾರಿ ಕಾಮಗಾರಿಗೆ ವೇಗ ನೀಡಬೇಕಿದೆ. ಒಟ್ಟು



2054.97 ಕೋಟಿ ರೂ. ಮೊತ್ತದ ಕಾಮಗಾರಿ ಇದಾಗಿದೆ. ಹಾಸನ, ತುಮಕೂರು ಮತ್ತು ಚಿತ್ರದುರ್ಗ ಜಿಲ್ಲೆಗಳ ಅಭಿವೃದ್ಧಿಗೆ ರಸ್ತೆ ಬಲ ನೀಡುತ್ತದೆ. ಜಿಲ್ಲೆಯ 674 ಎಕರೆ ಭೂಮಿ ಸ್ವಾಧೀನಪಡಿಸಿಕೊಳ್ಳಲಾಗಿದ್ದು ಪರಿಹಾರವಾಗಿ 336.86 ಕೋಟಿ ರೂ. ಅನುದಾನ ಬಿಡುಗಡೆಯಾಗಬೇಕಿದೆ.

ಹಾಸನ ತಾಲ್ಲೂಕಿನ 17 ಮತ್ತು ಅರಸೀಕೆರೆ ತಾಲ್ಲೂಕಿನಲ್ಲಿ 25 ಕಿ.ಮೀ. ವ್ಯಾಪ್ತಿಯಲ್ಲಿ ರಸ್ತೆ ಕೆಲಸ ಆಗಲಿದೆ. ಭೂಸ್ವಾಧೀನ ಪ್ರಕ್ರಿಯೆ ಈಗಾಗಲೇ ಮುಕ್ತಾಯಗೊಂಡಿದ್ದು ಪರಿಹಾರಕ್ಕಾಗಿ ರೈತರು ಚಾತಕ ಪಕ್ಷಿಯಂತೆ ಕಾಯುತ್ತಿದ್ದಾರೆ.

#### ಎನ್‌ಹೆಚ್ 75 ಸಮಸ್ಯೆ ಸರಿಪಡಿಸಿ

ರಾಷ್ಟ್ರೀಯ ಹೆದ್ದಾರಿ 75ರ ಚನ್ನರಾಯಪಟ್ಟಣ-ಹಾಸನ ಮಾರ್ಗದಲ್ಲಿ ಸಾಕಷ್ಟು ಕೆಲಸಗಳಾಗಬೇಕಿದೆ. ಇತ್ತೀಚಿನ ದಿನಗಳಲ್ಲಿ ವಾಹನಗಳ ಸಂಖ್ಯೆ ಹೆಚ್ಚಾಗಿರುವುದರಿಂದ ಅಪಘಾತ ಪ್ರಕರಣಗಳು ಮಿತಿಮೀರಿವೆ. ಮಂಗಳೂರು-ಬೆಂಗಳೂರು ಮಧ್ಯದ ಪ್ರಮುಖ ರಸ್ತೆ ಇದಾಗಿರುವುದರಿಂದ ಸಾವಿರಾರು ವಾಹನಗಳು ನಿತ್ಯ ಸಂಚರಿಸುತ್ತವೆ. ಈ ಹಿನ್ನಲೆಯಲ್ಲಿ ಚನ್ನರಾಯಪಟ್ಟಣ ಬೈಪಾಸ್ (ಕಿ.ಮೀ 140.449 ರಿಂದ 149.596) ಮತ್ತು ಹಾಸನ ಬೈಪಾಸ್ (ಕಿ.ಮೀ. 175.935 ರಿಂದ 185.684)ನ ನಾಲ್ಕು ಲೈನ್‌ಯಾಗಿ ವಿಸ್ತರಣೆ ಮಾಡುವಂತೆ ಕೇಂದ್ರ ಸರ್ಕಾರಕ್ಕೆ ಪ್ರಸ್ತಾವನೆ ಸಲ್ಲಿಸಲಾಗಿದೆ.

ದೇವಿಹಳ್ಳಿ (ಕಿ.ಮೀ 108.460) ರಿಂದ ಹಾಸನ (ಕಿ.ಮೀ 185.684)ರ ವರೆಗೆ ಗ್ರೇಡ್ ಸೆಪರೇಟರ್, ಸರ್ವಿಸ್ ರಸ್ತೆ ಮತ್ತು ಸುರಕ್ಷತಾ ಸೌಲಭ್ಯ ಕಲ್ಪಿಸಬೇಕಿದೆ. ಈ ಭಾಗವು ಗ್ರಾಮೀಣ ಪ್ರದೇಶಗಳನ್ನು ಒಳಗೊಂಡಿರುವುದರಿಂದ ಕೃಷಿಕರು, ಶಾಲಾ-ಕಾಲೇಜು ವಿದ್ಯಾರ್ಥಿಗಳು ಹೆಚ್ಚಾಗಿ ಓಡಾಡುತ್ತಾರೆ. ಆದ್ದರಿಂದ ಸರ್ವಿಸ್ ರಸ್ತೆ, ಸೇತುವೆ ಮತ್ತು ಇತರ ಸುರಕ್ಷತಾ ವ್ಯವಸ್ಥೆಗಳನ್ನು ಕಲ್ಪಿಸಬೇಕಿದೆ. ಆಯಕಟ್ಟಿನ ಸ್ಥಳಗಳಲ್ಲಿ ಸೂಚನಾ ಫಲಕ, ಲೈಟಿಂಗ್, ಬೇಲಿ ಮತ್ತು ಪಾದಚಾರಿ ಮಾರ್ಗಗಳ ನಿರ್ಮಿಸಬೇಕು ಎಂದು ಸಂಸದ ಶ್ರೇಯಸ್ ಪಟೇಲ್ ಸಚಿವರ ಗಮನ ಸೆಳೆದಿದ್ದಾರೆ.

### ಪಿಎಂಎವೈಜಿ: 25 ಸಾವಿರ ಮನೆ ಸೇರಿಸಿ

ಗ್ರಾಮೀಣಾಭಿವೃದ್ಧಿ ಇಲಾಖೆ ರಾಜ್ಯ ಸಚಿವ ಡಾ. ಶ್ರೀ ಚಂದ್ರಶೇಖರ್ ಪೆಮ್ಮಾಸಾನಿ ಅವರನ್ನು ಭೇಟಿಯಾಗಿ ಪ್ರಧಾನ ಮಂತ್ರಿ ಆವಾಸ್ ಯೋಜನೆ (ಪಿಎಂಎವೈಜಿ) ಅಡಿಯಲ್ಲಿ 25,020 ಮನೆಗಳನ್ನು 2025-26ರ ಸಮೀಕ್ಷಾ ಪಟ್ಟಿಗೆ ಸೇರಿಸಿಕೊಳ್ಳುವಂತೆ ಸಂಸದ ಶ್ರೇಯಸ್ ಪಟೇಲ್ ಮನವಿ ಮಾಡಿದರು.

2024-25ನೇ ಆರ್ಥಿಕ ವರ್ಷದಲ್ಲಿ ಜಿಲ್ಲೆಗೆ 33,692 ಫಲಾನುಭವಿಗಳಿಗೆ ಮನೆ ಮಂಜೂರು ಮಾಡಲಾಗಿತ್ತು. ಆದರೆ, 2018-19ರ ಹಳೆಯ ಸಮೀಕ್ಷೆ ಪ್ರಕಾರ ಕೇವಲ 8,672 ಫಲಾನುಭವಿಗಳನ್ನು ಮಾತ್ರ ಆಯ್ಕೆ ಮಾಡಲಾಗಿದ್ದು, ಅರ್ಜಿ ಸಲ್ಲಿಸಿದ್ದ 25,020 ಅರ್ಹ ಫಲಾನುಭವಿಗಳಿಗೆ ಮನೆ ಸಿಕ್ಕಿಲ್ಲ.

ಪ್ರಸಕ್ತ ಸಾಲಿನಲ್ಲಿ ಅರ್ಜಿ ಸಲ್ಲಿಕೆ ಪ್ರಕ್ರಿಯೆ ಜುಲೈ 31ಕ್ಕೆ ಕೊನೆಗೊಂಡಿದೆ. ಈ ವರ್ಷದ ಪಟ್ಟಿಗೆ ಬಾಕಿ ಉಳಿದ 25,020 ಮನೆಗಳನ್ನು ಸೇರಿಸಬೇಕು. ಇದರಿಂದ ಬಡಕುಟುಂಬಗಳ ಸ್ವಂತ ಸೂರಿನ ಕನಸು ನನಸಾಗುತ್ತದೆ. ಹಳೆಯ ಸಮೀಕ್ಷಾ ವರದಿಯ ತಾಂತ್ರಿಕ ಲೋಪಗಳನ್ನು ಬದಿಗೊತ್ತಿ ಅವಶ್ಯಕ ಕುಟುಂಬಗಳಿಗೆ ನೆರವಾಗಬೇಕು ಎಂದು ಕೋರಿದರು.

## ರೈಲು ನಿಲ್ದಾಣಗಳ ವಸ್ತುಸ್ಥಿತಿ ಪರಿಶೀಲಿಸಿದ ರೈಲ್ವೆ ವ್ಯವಸ್ಥಾಪಕ ಮಿತ್ತಲ್



ಹಾಸನ: ಮೈಸೂರು ವಿಭಾಗೀಯ ರೈಲ್ವೆ ವ್ಯವಸ್ಥಾಪಕ ಮುದಿತ್ ಮಿತ್ತಲ್ ಅವರು ಗುರುವಾರ ಹಾಸನ-ಬಂಟ್ವಾಳ ಮಾರ್ಗದ ರೈಲ್ವೆ ನಿಲ್ದಾಣ ಹಾಗೂ ಹಳಿಗಳ ಪರಿಶೀಲನೆ ನಡೆಸಿದರು. ಹಾಸನ-ಸಕಲೇಶಪುರ, ಸಕಲೇಶಪುರ-ಸುಬ್ರಹ್ಮಣ್ಯ ರಸ್ತೆ ಮತ್ತು ಸುಬ್ರಹ್ಮಣ್ಯ ರಸ್ತೆ-ಬಂಟ್ವಾಳ ಮಾರ್ಗಗಳವರೆಗೆ ತಪಾಸಣೆ ನಡೆಸಿ ಅಧಿಕಾರಿಗಳಿಂದ ಅಗತ್ಯ ಮಾಹಿತಿ ಪಡೆದರು.

ರೈಲ್ವೆ ಮಾರ್ಗದ ಮೇಲಿರುವ ಹಳೆಯ ಟ್ರ್ಯಾಕ್, ಮೂಲಸೌಕರ್ಯ, ಸಂಜ್ಞಾ ವ್ಯವಸ್ಥೆ (ಸಿಗ್ನಲಿಂಗ್ ಸಿಸ್ಟಮ್), ಭದ್ರತೆ ಮತ್ತು ನಿರ್ವಹಣಾ ವ್ಯವಸ್ಥೆ ವೀಕ್ಷಿಸಿದರು. ಸಕಲೇಶಪುರ ಮತ್ತು ಸುಬ್ರಹ್ಮಣ್ಯ ರಸ್ತೆಯ ನಡುವಿನ ಘಾಟ್ ವಿಭಾಗದಲ್ಲಿ ಟ್ರ್ಯಾಕ್ ನಿಯತಾಂಕಗಳು, ಸೇತುವೆಗಳು, ಮಾರ್ಗ ತಿರುವು ಮತ್ತು ಇಳಿಜಾರು ಪ್ರದೇಶಗಳಲ್ಲಿನ ವ್ಯವಸ್ಥೆ ಕುರಿತು ಅಧ್ಯಯನ ನಡೆಸಿದರು.

ಪ್ರಯಾಣಿಕರಿಗೆ ಉತ್ತಮ ಸೌಲಭ್ಯ, ನಿಲ್ದಾಣಗಳ ಮೇಲ್ದರ್ಜೆ ಹಾಗೂ ಆಕರ್ಷಕ ವಾತಾವರಣ ಕಲ್ಪಿಸುವ ಉದ್ದೇಶದಿಂದ ಅಮೃತ ಭಾರತ ನಿಲ್ದಾಣ ಯೋಜನೆ ಕೈಗೆತ್ತಿಕೊಳ್ಳಲಾಗಿದೆ. ಸಕಲೇಶಪುರ, ಸುಬ್ರಹ್ಮಣ್ಯ ರಸ್ತೆ ಮತ್ತು ಬಂಟ್ವಾಳ ರೈಲು ನಿಲ್ದಾಣಗಳಲ್ಲಿ ಕಾಮಗಾರಿ ನಡೆಯುತ್ತಿದ್ದು ಅದನ್ನು ಮುದಿತ್ ಮಿತ್ತಲ್ ಪರಿಶೀಲಿಸಿ ನಿಗದಿತ ಅವಧಿಯೊಳಗೆ ಕೆಲಸ ಮುಗಿಸುವಂತೆ ಸಂಬಂಧಪಟ್ಟ ಇಂಜಿನಿಯರ್ ಹಾಗು ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಗತಿಶಕ್ತಿ ಘಟಕದ ಮುಖ್ಯ ಯೋಜನಾ ವ್ಯವಸ್ಥಾಪಕ ಆನಂದ್ ಭಾರತಿ ಹಾಗೂ ಹಿರಿಯ ವಿಭಾಗೀಯ ಅಧಿಕಾರಿಗಳು ಉಪಸ್ಥಿತರಿದ್ದರು.

## ಕೆರೆಗಳ ಸಂರಕ್ಷಣೆಗೆ ಅಧಿಕಾರಿಗಳು ಗಮನ ಹರಿಸಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಜಿಲ್ಲೆಯಲ್ಲಿ ಕೆರೆಗಳ ಒತ್ತುವರಿ ಪತ್ತೆ ಹಚ್ಚುವುದು, ತೆರವುಗೊಳಿಸುವುದು, ಸಂರಕ್ಷಣೆ ಮತ್ತು ಅಭಿವೃದ್ಧಿಗೆ ಕ್ರಮವಹಿಸುವಂತೆ ಜಿಲ್ಲಾಧಿಕಾರಿ ಕೆ.ಎಸ್. ಲತಾಕುಮಾರಿ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಗುರುವಾರ ಹಮ್ಮಿಕೊಂಡಿದ್ದ ಜಿಲ್ಲಾ ಕೆರೆ ಒತ್ತುವರಿ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಮಾತನಾಡಿ, ಹುಣಸಿನಕೆರೆ ದಡದಲ್ಲಿ ಸಾರ್ವಜನಿಕರು ಕಸ ಹಾಕುತ್ತಿದ್ದಾರೆ. ಈ ಕೆರೆ ಸುತ್ತ ಬೇಲಿ ನಿರ್ಮಾಣ ಮಾಡಿ ಸಂರಕ್ಷಣೆ ಮಾಡಿ ಜೊತೆಗೆ ಕೆರೆ ಅಭಿವೃದ್ಧಿಗೆ ಕ್ರಮ ವಹಿಸುವಂತೆ ಬೃಹತ್ ನೀರಾವರಿ ಇಲಾಖೆ ಅಧಿಕಾರಿಗಳಿಗೆ ಸೂಚಿಸಿದರು.

ಕೆರೆಯ ಬಳಿಯಿರುವ ಮನೆಗಳ ಡ್ರೈನೇಜ್ ನೀರು ಕೆರೆಗೆ ಹರಿಯುವಂತೆ



ಸಂಪರ್ಕ ನೀಡಿದ್ದಾರೆ. ಅದನ್ನು ಮೊದಲು ತಪ್ಪಿಸಬೇಕು ಎಂದು ಹೇಳಿದರು.

ಉಪಲೋಕಾಯುಕ್ತರು ಜಿಲ್ಲೆಗೆ ಭೇಟಿ ನೀಡಿದ ಸಂದರ್ಭದಲ್ಲಿ ನೀಡಿರುವ ನಿರ್ದೇಶನದಂತೆ ಅಧಿಕಾರಿಗಳು ಕೈಗೊಂಡಿರುವ ಕ್ರಮಗಳ ಬಗ್ಗೆ ಕೂಡಲೇ ವರದಿ ಲೋಕಾಯುಕ್ತ ಕಚೇರಿಗೆ ಕಳುಹಿಸುವಂತೆ ಸೂಚಿಸಿದರು.

ಪ್ರತಿ ತಾಲ್ಲೂಕಿನಲ್ಲಿ ಕೆರೆ ಒತ್ತುವರಿ ಬಗ್ಗೆ ಸಭೆ ನಡೆಸಿ ಒತ್ತುವರಿ ಗುರುತಿಸಿ ತೆರವುಗೊಳಿಸಿರುವ ಸಂಖ್ಯೆ, ತೆರವಿಗೆ ಬಾಕಿಯಿರುವ ಸಂಖ್ಯೆ ಮತ್ತು ತೆರವಿಗೆ ಏನು ಸಮಸ್ಯೆ ಇದೆ ಎಂಬುದರ ಬಗ್ಗೆ ವರದಿ ನೀಡಲು ಅಧಿಕಾರಿಗಳಿಗೆ ಸೂಚಿಸಿದರು. ಜಿಲ್ಲೆಯಲ್ಲಿರುವ ಕೆರೆಗಳು ಪೂರ್ಣ ಪ್ರಮಾಣದಲ್ಲಿ ಶೇ. 50ಕ್ಕಿಂತ ಕಡಿಮೆ ನೀರು ತುಂಬಿರುವ ಹಾಗೂ ಕೆರೆಯಲ್ಲಿ ನೀರೇ ಇಲ್ಲದಿರುವ ಕೆರೆಗಳ ಬಗ್ಗೆ ಮಾಹಿತಿ ನೀಡಬೇಕು. ಹೂಳು ತೆಗೆಯಲು, ನೀರು ಸರಾಗವಾಗಿ ಹರಿಯಲು ಕಾಲುವೆಗಳನ್ನು ಸ್ವಚ್ಛಗೊಳಿಸಲು ಕ್ರಮ ವಹಿಸುವುದರ ಮೂಲಕ ಕೆರೆಗಳ ಮೇಲ್ವಿಚಾರಣೆ ಮಾಡುವಂತೆ ತಿಳಿಸಿದರು.

ಕೆರೆಗಳ ನೀರಿನ ಮಾದರಿ ಪರೀಕ್ಷೆ ನಡೆಸಬೇಕು. ಬಳಕೆಗೆ ಯೋಗ್ಯವಾಗಿದೆಯೇ ಎಂಬುದರ ಬಗ್ಗೆ ಪರೀಕ್ಷೆ ಮಾಡಿಸಬೇಕು. ನೀರು ಕಲುಷಿತಗೊಂಡಿರುವ ಬಗ್ಗೆ ಅನುಮಾನ ಬಂದರೆ ಪರಿಸರ ಇಲಾಖೆ ಗಮನಕ್ಕೆ ತಂದು ನೀರಿನ ಮಾದರಿಗಳನ್ನು ಪರೀಕ್ಷೆ ನಡೆಸುವಂತೆ ನಿರ್ದೇಶನ ನೀಡಿದರು.

ಜಿಲ್ಲೆಯಲ್ಲಿರುವ ಎಲ್ಲಾ ಕೆರೆಗಳನ್ನು ಅಳತೆ ಮಾಡಿಸಿ ಒತ್ತುವರಿ ಗುರುತಿಸಿ ಮುಂದಿನ ಪೀಳಿಗೆಗೆ ಆಸ್ತಿಯಾಗಿರುವ ಕೆರೆಗಳನ್ನು ಸಂರಕ್ಷಣೆ ಮಾಡುವುದು ಬಹುಮುಖ್ಯ ಎಂದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಜಿ.ಕೆ. ದಾಕ್ಷಾಯಿಣಿ, ಜಿಲ್ಲಾ ಪಂಚಾಯಿತಿ ಉಪ ಕಾರ್ಯದರ್ಶಿ ಕೃಷ್ಣಮೂರ್ತಿ, ಸಣ್ಣ ನೀರಾವರಿ ಇಲಾಖೆ ಕಾರ್ಯಪಾಲಕ ಅಭಿಯಂತರ ರಾಮಚಂದ್ರ, ಯೋಜನಾ ನಿರ್ದೇಶಕ ನಾಗರಾಜ್ ಇತರರಿದ್ದರು.

## ಕ್ರೀಡಾಕೂಟಕ್ಕೆ ಸರ್ಕಾರದ ಪ್ರೋತ್ಸಾಹ ಬೇಕು: ಬಾಲಕೃಷ್ಣ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಚನ್ನರಾಯಪಟ್ಟಣ: ಸರ್ಕಾರವು ಶೈಕ್ಷಣಿಕ ಕ್ಷೇತ್ರದಲ್ಲಿ ದೈಹಿಕ ಶಿಕ್ಷಣಕ್ಕೆ ಒತ್ತು ನೀಡಿ, ಹೆಚ್ಚಿನ ಅನುದಾನವನ್ನು ಕಲ್ಪಿಸುವ ಮೂಲಕ ಕ್ರೀಡೆಗೆ ಪ್ರೋತ್ಸಾಹಿಸಬೇಕು ಎಂದು ಶಾಸಕ ಸಿ.ಎನ್. ಬಾಲಕೃಷ್ಣ ಹೇಳಿದರು.

ತಾಲ್ಲೂಕಿನ ಹಿರೀಸಾವೆ ಗ್ರಾಮದ ಎನ್.ಗಂಗಾಧರ್ ಕ್ರೀಡಾಂಗಣದಲ್ಲಿ ಏರ್ಪಡಿಸಿದ್ದ ಹೋಬಳಿ ಮಟ್ಟದ ಹಿರಿಯ ಪ್ರಾಥಮಿಕ ಶಾಲೆಗಳ ಕ್ರೀಡಾಕೂಟ ಉದ್ಘಾಟಿಸಿ ಮಾತನಾಡಿ, ದೈಹಿಕ ಶಿಕ್ಷಣವೇ ಆರೋಗ್ಯದ ತಳಹದಿ ಎಂದರು.

ಶಿಕ್ಷಣದ ಜೊತೆಯಲ್ಲಿ ದೈಹಿಕ ಶಿಕ್ಷಣಕ್ಕೆ ದಿನದಲ್ಲಿ ಒಂದು ಗಂಟೆಯನ್ನು ಶಿಕ್ಷಕರು ಮೀಸಲಿಡುವ ಮೂಲಕ ಕ್ರೀಡೆಗಳ ತರಬೇತಿ ನೀಡಬೇಕು. ತಾಲ್ಲೂಕು ಮಟ್ಟದಿಂದ ಜಿಲ್ಲಾ, ರಾಜ್ಯ ಮಟ್ಟಕ್ಕೆ ಆಯ್ಕೆಯಾದ ಕ್ರೀಡಾಪಟುಗಳಿಗೆ



ಆರ್ಥಿಕ ನೆರವು ಸೇರಿ ಎಲ್ಲ ರೀತಿಯ ಸಹಕಾರ ನೀಡಲಾಗುವುದು ಎಂದು ತಿಳಿಸಿದರು.

ತಾಲ್ಲೂಕು ಪಂಚಾಯಿತಿ ಮಾಜಿ ಸದಸ್ಯ ರವಿಕುಮಾರ್ ಮಾತನಾಡಿ, ಹಿರೀಸಾವೆ ಹೋಬಳಿಯಲ್ಲಿ ದೇವರಾಜು ಎಂಬ ಒಬ್ಬರೇ ದೈಹಿಕ ಶಿಕ್ಷಣ ಶಿಕ್ಷಕರಿದ್ದು ಸಮಸ್ಯೆಯಾಗುತ್ತಿದೆ. ಅಗತ್ಯ ಶಾಲೆಗಳಿಗೆ ದೈಹಿಕ ಶಿಕ್ಷಣ ಶಿಕ್ಷಕರ ನೇಮಕಾತಿ ಬಗ್ಗೆ ಸರ್ಕಾರ ಗಮನಹರಿಸಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ದೀಪಾ ಮಾತನಾಡಿ, ಮೊಬೈಲ್ ಸೇರಿದಂತೆ ಆಧುನಿಕ ತಂತ್ರಜ್ಞಾನಕ್ಕೆ ಮಾರು ಹೋಗಿರುವ ವಿದ್ಯಾರ್ಥಿಗಳು ದೈಹಿಕ ಶ್ರಮಕ್ಕೆ ಮನಸ್ಸು ಕೊಡುತ್ತಿಲ್ಲ. ಅದರಿಂದ ಆರೋಗ್ಯ ಸಮಸ್ಯೆಗಳು ಉಂಟಾಗುತ್ತಿವೆ. ಪಾಲಕರು ತಾವು ಆರಾಮವಾಗಿ ಟಿ.ವಿ. ವೀಕ್ಷಿಸುವ ಸಲುವಾಗಿ ಮಕ್ಕಳ ಕೈಗೆ ಮೊಬೈಲ್ ಕೊಡುವುದು ಸರಿಯಲ್ಲ. ಮಕ್ಕಳ ಆರೋಗ್ಯ ಹಾಗೂ ಶಿಕ್ಷಣದ ಕಡೆಗೆ ಹೆಚ್ಚು ಆದ್ಯತೆ ನೀಡಬೇಕು ಎಂದು ಕಿವಿಮಾತು ಹೇಳಿದರು.

ಗ್ರಾಮ ಪಂಚಾಯಿತಿ ಅಧ್ಯಕ್ಷೆ ಜಯಮ್ಮ ಬೋರಯ್ಯ ಕ್ರೀಡಾ ಧ್ವಜಾರೋಹಣ ಹಾಗೂ ಕೃಷಿ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಹೆಚ್. ಜೆ.ಮಹೇಶ್ ಕ್ರೀಡಾ ಜ್ಯೋತಿ ಬೆಳಗಿಸಿದರು. ಕ್ರೀಡೆಗಳಲ್ಲಿ ಗೆಲುವು ಸಾಧಿಸಿದ ವಿದ್ಯಾರ್ಥಿಗಳಿಗೆ ಶಾಸಕರು ಬಹುಮಾನ ನೀಡಿದರು.

ಬಿಆರ್‌ಸಿ ಅನಿಲ್, ಇಸಿಒ ಎಸ್. ಶ್ರೀನಿವಾಸ್, ಗ್ರಾಮ ಪಂಚಾಯಿತಿ ಸದಸ್ಯರಾದ ಬೋರಣ್ಣ, ಮಾರುತಿ ಮಂಜು, ತಂಗಾಲಕ್ಷ್ಮಿ, ಭಾಗ್ಯಲಕ್ಷ್ಮಿ, ಪಿಡಿಒ ಕೆ.ಜೆ.ಸತೀಶ್, ಸೊಸೈಟಿ ಕಾರ್ಯನಿರ್ವಹಣಾಧಿಕಾರಿ ಹರೀಶ್, ಎಚ್.ಕೆ. ವೆಂಕಟೇಶ್ ಮತ್ತಿತರರಿದ್ದರು.

## ಜೀ ಕನ್ನಡದಲ್ಲಿ ಹೊಚ್ಚ ಹೊಸ ರಿಯಾಲಿಟಿ ಶೋ 'ನಾವು ನಮ್ಮವರು' ಇದೇ ಶನಿವಾರದಿಂದ




ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ನಿಮ್ಮನ್ನು ಮನರಂಜಿಸಲು ಬರ್ತಿದೆ ಸಂಬಂಧಗಳ ನಡುವಿನ ಪ್ರೀತಿ ಸಾರುವ ಟನಾವು ನಮ್ಮವರುಟ ಧಾರಾವಾಹಿಗಳು, ರಿಯಾಲಿಟಿ ಶೋಗಳು, ಗೇಮ್ ಶೋಗಳಿಂದ ವೀಕ್ಷಕರ ಮನ ಗೆದ್ದು ನಂಬರ್ 1 ಸ್ಥಾನದಲ್ಲಿ ಇರುವ ಮನರಂಜನೆಯ ಮಹಾತಾಣ ಜೀ ಕನ್ನಡ. ಡ್ರಾಮಾ ಜೂನಿಯರ್ಸ್, ಸರಿಗಮಪ, ವೀಕೆಂಡ್ ವಿತ್ ರಮೇಶ್, ಕಾಮಿಡಿ ಕಿಲಾಡಿಗಳು, ಡಾನ್ಸ್ ಕರ್ನಾಟಕ ಡಾನ್ಸ್ , ಜೋಡಿ ನಂಬರ್ 1, ಮತ್ತು ಸೂಪರ್ ಕ್ವೀನ್ ಅಂತಹ ಅನೇಕ ಜನಮೆಚ್ಚಿದ ರಿಯಾಲಿಟಿ ಶೋಗಳನ್ನು ಜನರ ಮುಂದಿಟ್ಟು ಅದರಲ್ಲಿ ಯಶಸ್ವಿ ಆಗಿರುವ ಜೀ ಕನ್ನಡ ಈಗ ಮತ್ತೊಂದು ಪ್ರಯತ್ನಕ್ಕೆ ಮುಂದಾಗಿದೆ. ಹೊಚ್ಚ ಹೊಸ ರಿಯಾಲಿಟಿ ಶೋ ನಾವು ನಮ್ಮವರು ಇದೇ ಆಗಸ್ಟ್ 2 ರಿಂದ ರಾತ್ರಿ 9 ಗಂಟೆಗೆ ನಿಮ್ಮನ್ನು ಮನರಂಜಿಸಲಿದೆ.

ಕನ್ನಡ ಕಿರುತೆರೆ ಇತಿಹಾಸದಲ್ಲಿಯೇ ಇದು ವಿಭಿನ್ನ ಪ್ರಯತ್ನವಾಗಿದ್ದು ನಿಮ್ಮ ನೆಚ್ಚಿನ ತಾರೆಯರು ಅವರ ಕುಟುಂಬದವರ ಜೊತೆಗೆ ಹೇಗೆ ಇರುತ್ತಾರೆ ಎಂಬುದನ್ನು ನಿಮ್ಮ ತನಕ ತಲುಪಿಸುವುದೇ ಈ ರಿಯಾಲಿಟಿ ಶೋದ ಮುಖ್ಯ ಉದ್ದೇಶ. ಈ ರಿಯಾಲಿಟಿ ಶೋನಲ್ಲಿ ಸಕ್ಕತ್ ಟ್ವಿಸ್ಟ್ ಜೊತೆಗೆ ಫನ್ ಇರಲಿದ್ದು ನಿಮಗೆ 100% ಮನರಂಜನೆ ಸಿಗೋದಂತೂ ಗ್ಯಾರಂಟಿ. ಅಷ್ಟೇ ಅಲ್ಲದೇ ಪ್ರತಿವಾರ ವಿಭಿನ್ನ ಬಗೆಯ ರೌಂಡ್ಸ್ ಇರಲಿದ್ದು ಯಾರು ಹೇಗೆ ಪರ್ಫಾರ್ಮ್ ಮಾಡ್ತಾರೆ ಎನ್ನುವುದಕ್ಕೆ ಮುಂದಿನ ದಿನಗಳಲ್ಲಿ ಉತ್ತರಸಿಗಲಿದೆ.

ತರ್ಲೆಮಾತು, ವಿಭಿನ್ನ ನಿರೂಪಣಾ ಶೈಲಿಯಿಂದ ಕನ್ನಡಿಗರ ಮನಗೆದ್ದ ನಿರಂಜನ್ ದೇಶಪಾಂಡೆ ಅವರು ನಾವು ನಮ್ಮವರು ರಿಯಾಲಿಟಿ ಶೋ ನ ನಿರೂಪಣಾ ಜವಾಬ್ದಾರಿಯನ್ನು ಹೊತ್ತು ಕೊಂಡರೆ ಗೋಲ್ಡನ್ ಕ್ವೀನ್ ಅಮೂಲ್ಯ, ಎವರ್ಗ್ರೀನ್ ಚೆಲುವೆ ಮತ್ತು ಪೊಲಿಟಿಷಿಯನ್ ತಾರಾಅನುರಾಧ, ಎಲ್ಲರ ನೆಚ್ಚಿನ ನಟ ಶರಣ್ ಅವರು ತೀರ್ಪುಗಾರರಾಗಿ ಕಾರ್ಯನಿರ್ವಹಿಸಲಿದ್ದಾರೆ. ಇನ್ನು ಕರುನಾಡು ಮೆಚ್ಚಿದ ಸೆಲೆಬ್ರಿಟಿಗಳಾದ ರಜತ್ -ಅಕ್ಷತಾ,ಸುಜಯ್-ಸಿಂಚನ,ಪ್ರಿಯಕೆಸರೆ-ಶಿವರಾಂ,

ಅಲ್ಲುರಘು-ಸುಶ್ಮಿತಾ,

ಮಲ್ಲಯ್ಯ-ನೀಲಮ್ಮ, ಮೋಹನ್ ಕುಮಾರ್ -ಪಲ್ಲವಿ, ವಿಶಾಲ್ ಹೆಗ್ಡೆ-ಪ್ರಿಯ, ಶಿಲ್ಪ-ಶೈಲೇಶ್, ಸಮೀರ್ ಆಚಾರ್ಯ-ಶ್ರಾವಣಿ ತಮ್ಮ ಕುಟುಂಬದವರೊಡನೆ ಸೇರಿ ಈ ರಿಯಾಲಿಟಿ ಶೋನಲ್ಲಿ ಸ್ಪರ್ಧಿಸಲಿದ್ದಾರೆ..

ಸಂಬಂಧ, ಒಗ್ಗಟ್ಟಿಗೆ ಬೆಲೆ ಕೊಡುವ ಕೊಡುವ ವಿಭಿನ್ನ ಕಾನ್ಸೆಪ್ಟ್ ಇರುವ ಹೊಚ್ಚ ಹೊಸ ರಿಯಾಲಿಟಿ ಶೋ ಟನಾವುನಮ್ಮವರುಟ! ಇಲ್ಲಿ ಸ್ಪರ್ಧಿಗಳು ಅನೇಕ ಟ್ವಿಸ್ಟ್ ಇರುವ ಬೇರೆ ಬೇರೆ ಟಾಸ್ಕ್‌ಗಳಲ್ಲಿ ತಮ್ಮ ಕುಟುಂಬದವರ ಜೊತೆ ಸೇರಿ ಭಾಗವಹಿಸಲಿದ್ದಾರೆ. ಸಂಬಂಧಗಳನ್ನು ಸಂಭ್ರಮಿಸೋ ಟನಾವುನಮ್ಮವರುಟ ರಿಯಾಲಿಟಿ ಶೋ ಕುಟುಂಬದ ಹಳೆಯ ನೆನಪುಗಳನ್ನು ಸೆಲೆಬ್ರಿಟಿ ಸ್ಪರ್ಧಿಗಳ ಮೂಲಕ ವೀಕ್ಷಕರ ಮುಂದಿಡುವ ಕನ್ನಡಿ!

ಸಂಬಂಧಗಳ ಬೇರನ್ನು ಗಟ್ಟಿ ಮಾಡುವ ಹೊಸ ರಿಯಾಲಿಟಿ ಶೋ ಟನಾವುನಮ್ಮವರುಟ ಇದೇ ಆಗಸ್ಟ್ 2 ರಿಂದರಾತ್ರಿ 9 ಗಂಟೆಗೆ ನಿಮ್ಮ ಜೀ ಕನ್ನಡದಲ್ಲಿ!

## ಶಾಂತಕುಮಾರ್ ನಿಧನಕ್ಕೆ ಪತ್ರಕರ್ತರ ಸಂತಾಪ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಅರಸೀಕೆರೆ ತಾಲ್ಲೂಕು ಕನ್ನಡಪ್ರಭ ವರದಿಗಾರ ಪಿ.ಶಾಂತಕುಮಾರ್ (59) ಅವರ ನಿಧನಕ್ಕೆ ಜಿಲ್ಲಾ ಪತ್ರಕರ್ತರ ಸಂಘದಲ್ಲಿ ಗುರುವಾರ ಸಂತಾಪ ಸೂಚಿಸಲಾಯಿತು.

ಸಂಘದ ಅಧ್ಯಕ್ಷ ಕೆ.ಹೆಚ್. ವೇಣುಕುಮಾರ್ ಅಧ್ಯಕ್ಷತೆಯಲ್ಲಿ ನಡೆದ ಕಾರ್ಯಕ್ರಮದಲ್ಲಿ ಮಾತನಾಡಿದ ಪತ್ರಕರ್ತರು, ಶಾಂತಕುಮಾರ್ ಅವರ ಒಡನಾಟದ ಕುರಿತು ಅನುಭವ ಹಂಚಿಕೊಂಡರು.

ಮಾಜಿ ಅಧ್ಯಕ್ಷ ಕೆ.ಆರ್. ಮಂಜುನಾಥ್ ಮಾತನಾಡಿ,, ಅರಸೀಕೆರೆಯ ಹಿಂದಿನಿಂದಲೂ ಆರೇಳು ಮಂದಿ ಹಿರಿಯ ಪತ್ರಕರ್ತರಲ್ಲಿ ಶಾಂತಕುಮಾರ್ ಒಬ್ಬರು. 30 ವರ್ಷಗಳ ಕಾಲ ವರದಿಗಾರರಾಗಿ ಪ್ರಾಮಾಣಿಕವಾಗಿ ಸೇವೆ ಸಲ್ಲಿಸುವುದರ ಜೊತೆಗೆ, ಏಜೆಂಟರಾಗಿಯೂ ಕೆಲಸ ಮಾಡುತ್ತಿದ್ದರು. ತುಂಬಾ ಶ್ರಮ ಜೀವಿಯಾಗಿದ್ದರು. ಅವರ ದಿಢೀರ್




ಸಾವು ಅತೀವ ನೋವು ತಂದಿದೆ ಎಂದರು.

ಮತ್ತೊಬ್ಬ ಮಾಜಿ ಅಧ್ಯಕ್ಷ ಎಸ್. ಆರ್.ಪ್ರಸನ್ನ ಕುಮಾರ್ ಮಾತನಾಡಿ, ಸೌಮ್ಯ ಸ್ವಭಾವ, ವಿವಾದ ರಹಿತ ವ್ಯಕ್ತಿಯಾಗಿದ್ದ ಶಾಂತಕುಮಾರ್ ಅವರು ಎಲ್ಲರನ್ನೂ ಸಮಾನವಾಗಿ ಕಾಣುತ್ತಿದ್ದರು. ಆದರೆ ನಿರಂತರ ದುಡಿಮೆಯ ಜೊತೆಗೆ ಅವರ ಆರೋಗ್ಯದ ಕಡೆ ಗಮನ ಹರಿಸದೇ ಹೋಗಿದ್ದು, ಅವರ ಅಗಲಿಕೆಗೆ ಕಾರಣ, ಪತ್ರಕರ್ತರು ಕರ್ತವ್ಯದ ಜೊತೆಗೆ ಆರೋಗ್ಯದ ಕಡೆಯೂ ಗಮನ ಹರಿಸಬೇಕು ಎಂದು ಸಲಹೆ ನೀಡಿದರು.

ಕಾರ್ಯದರ್ಶಿ ಹೆಚ್.ಟಿ.ಮೋಹನ್ ಕುಮಾರ್ ಮಾತನಾಡಿ, ಸರಳ ಜೀವಿ ಶಾಂತಕುಮಾರ್, ಮುಂಜಾನೆಯಿಂದ ರಾತ್ರಿವರೆಗೂ ಕೆಲಸ ನಿರ್ವಹಿಸುವ ಮೂಲಕ ಕಾರ್ಯನಿರತ ಪತ್ರಕರ್ತರಿಗೆ ಕಣ್ಣ ಮುಂದಿನ ಉದಾಹರಣೆಯಾಗಿದ್ದರು ಎಂದರು.

ಅಧ್ಯಕ್ಷ ಹೆಚ್.ಕೆ. ವೇಣುಕುಮಾರ್ ಮಾತನಾಡಿ, ಶಾಂತಕುಮಾರ್ ಮೂರು ದಶಕಗಳ ಕಾಲ ಪ್ರಾಮಾಣಿಕವಾಗಿ ಸೇವೆ ಸಲ್ಲಿಸಿ, ಎಲ್ಲರಿಗೂ ಮಾದರಿಯಾಗಿ ಕೆಲಸ ಮಾಡಿದ್ದರು. ಆದರೆ ಅವರ ಆರೋಗ್ಯದ ಬಗ್ಗೆ ಕಾಳಜಿ ವಹಿಸದೇ ಹೋಗಿದ್ದು, ಅವರ ಅಗಲಿಕೆಗೆ ಕಾರಣ, ನಾವೆಲ್ಲರೂ ವೃತ್ತಿಯ ಜೊತೆಗೆ ಆರೋಗ್ಯದ ಗಮನ ಕೊಡಬೇಕು ಎಂದು ಕಿವಿಮಾತು ಹೇಳಿದರು.

ರಾಷ್ಟ್ರೀಯ ಮಂಡಳಿ ಸದಸ್ಯ ಜಿ.ಪ್ರಕಾಶ್, ಉಪಾಧ್ಯಕ್ಷ ಕೆ.ಎಂ. ಹರೀಶ್, ಆನಂದ್ ಪಟೇಲ್ ಮಾತನಾಡಿದರು. ಸಂಘದ ಪ್ರಧಾನ ಕಾರ್ಯದರ್ಶಿ ಬಿ.ಸಿ. ಶಶಿಧರ್, ಕಾರ್ಯದರ್ಶಿಗಳಾದ ಪಿ.ಎ. ಶ್ರೀನಿವಾಸ್ ಮತ್ತು ಸಿ.ಬಿ. ಸಂತೋಷ್ ಇದ್ದರು.

### ಸೌಮ್ಯ ಸ್ವಭಾವದ ಪತ್ರಕರ್ತ ಶಾಂತಕುಮಾರ್



ಮೆದುಳಿಗೆ ಸಣ್ಣ ಪ್ರಮಾಣದ ಪಾರ್ಶ್ವವಾಯು ಆಗಿ ನಂತರ ಹೃದಯಘಾತ ಸಂಭವಿಸಿ ಹಾಸನದ ಖಾಸಗಿ ಆಸ್ಪತ್ರೆಗೆ ಶಾಂತಕುಮಾರ್ ದಾಖಲಾಗಿದ್ದರು. ಚಿಕಿತ್ಸೆ ಫಲಕಾರಿಯಾಗದೆ ಬುಧವಾರ ರಾತ್ರಿ ಕೊನೆಯುಸಿರೆಳೆದಿದ್ದರು. ಇಂದು ಮಧ್ಯಾಹ್ನ ನಂತರ ಮೃತರ ಸ್ವಗ್ರಾಮ ಹಾರನಹಳ್ಳಿಯಲ್ಲಿ ಅಂತ್ಯಕ್ರಿಯೆ ನೆರವೇರಿತು.

30 ವರ್ಷಗಳ ಪತ್ರಿಕೋದ್ಯಮದಲ್ಲಿ ಕೆಲಸ ಮಾಡಿದ ಅವರು ಸೌಮ್ಯ ಸ್ವಭಾವ, ಸಜ್ಜನಿಕೆ ಹಾಗೂ ಪ್ರಾಮಾಣಿಕತೆಗೆ ಹೆಸರಾಗಿದ್ದರು.

ಕೋಡಿಮಠದ ಸ್ವಾಮೀಜಿ ಡಾ. ಶಿವಾನಂದ ಶಿವಯೋಗಿ ರಾಜೇಂದ್ರ ಮಹಾಸ್ವಾಮಿಜಿ, ಅರಸೀಕೆರೆ ಶಾಸಕ ಕೆ.ಎಂ.ಶಿವಲಿಂಗೇಗೌಡ, ತಹಶೀಲ್ದಾರ್ ಸಂತೋಷ್‌ಕುಮಾರ್, ತಾಲ್ಲೂಕು ಪತ್ರಕರ್ತರ ಸಂಘದ ಅಧ್ಯಕ್ಷ ಮಂಜುನಾಥ್, ಮಾಜಿ ಆನಂದ್ ಟಿ., ಕೆಯೂಡಬ್ಲ್ಯೂಜೆ ರಾಜ್ಯಾಧ್ಯಕ್ಷ ಶಿವಾನಂದ ತಗಡೂರು, ಕಾರ್ಯಕಾರಿ ಸಮಿತಿ ಸದಸ್ಯ ಹೆಚ್.ಬಿ.ಮದನಗೌಡ, ವಿಶೇಷ ಪ್ರತಿನಿಧಿ ರವಿ ನಾಕಲಗೂಡು, ಜಿಲ್ಲಾ ಹಾಗೂ ಸಣ್ಣ ಪತ್ರಿಕೆಗಳ ಸಂಪಾದಕರ ಸಂಘದ ರಾಜ್ಯಾಧ್ಯಕ್ಷ ಜೆ.ಆರ್.ಕೆಂಚೇಗೌಡ ಮೊದಲಾದವರು ಕಂಬನಿ ಮಿಡಿದಿದ್ದಾರೆ.

## ಗಾಂಜಾ ಮಾರಾಟಕ್ಕೆ ಯತ್ನಿಸಿದ ಇಬ್ಬರ ಬಂಧನ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ಅಕ್ರಮವಾಗಿ ಗಾಂಜಾ ಮಾರಾಟಕ್ಕೆ ಯತ್ನಿಸಿದ ಅಸ್ಸಾಂ ಮೂಲದ ಇಬ್ಬರನ್ನು ಗ್ರಾಮಾಂತರ ಠಾಣೆ ಪೊಲೀಸರು ಗುರುವಾರ ಬಂಧಿಸಿದ್ದಾರೆ.

ಅಸ್ಸಾಂನ ಸಂಶುಲ್ ಹಕ್ ಮತ್ತು ಹುರುಮುಜ್ ಆಲಿ ಬಂಧಿತರು. ತಾಲ್ಲೂಕಿನ ಬಾಳ್ಳುಪೇಟೆ-ಜಮ್ಮನಹಳ್ಳಿ ರಸ್ತೆಯಲ್ಲಿ ಇಬ್ಬರು ಗಾಂಜಾ ಪದಾರ್ಥದೊಂದಿಗೆ ನಿಂತಿದ್ದರು. ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿದ ಗ್ರಾಮಾಂತರ ಠಾಣೆ ಪೊಲೀಸರು ವಶಕ್ಕೆ ಪಡೆದಿದ್ದಾರೆ.

ಕೊಡಗು ಜಿಲ್ಲೆ ವಿರಾಜಪೇಟೆ ತಾಲ್ಲೂಕಿನ ಚೇಯಂಡಣೆ ಗ್ರಾಮದ ದಯಾ ಅವರ ಕಾಫಿ ಎಸ್ಟೇಟ್‌ನಲ್ಲಿ ಕೂಲಿ ಕೆಲಸಕ್ಕೆಂದು ಬಂದಿದ್ದರು.

ಬಂಧಿತರಿಂದ 36 ಸಾವಿರ ರೂ. ಬೆಲೆ ಬಾಳುವ 2 ಕೆ.ಜಿ. ಗಾಂಜಾ ಸೊಪ್ಪು ವಶಪಡಿಸಿಕೊಳ್ಳಲಾಗಿದೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ.

## ಕೆ.ಆರ್. ವಿಶ್ವೇಶ್ವರ ನಿಧನ



ಹಾಸನ: ನಗರದ ಸಾಲಗಾಮೆ ರಸ್ತೆ, ವಿದ್ಯುತ್ ನಗರದ ಮಂಜುನಾಥ ಸ್ಟೇಷನರಿಸ್ ಮಾಲೀಕ ವಿಶ್ವೇಶ್ವರ ಕೆ.ಆರ್. (80) ಗುರುವಾರ ನಿಧನರಾದರು. ಮೂಲತಃ ಕುಂದಾಪುರ ಸಮೀಪದ ಸಾಲಿಗ್ರಾಮವರಾದ ಅವರು 1988ರಲ್ಲಿ ನಗರದಲ್ಲಿ ಹೋಟೆಲ್ ಉದ್ಯಮ ಆರಂಭಿಸಿದ್ದರು. ಜನಾನುರಾಗಿಯಾಗಿದ್ದ ಅವರ ಹೋಟೆಲ್ ಶುಚಿ-ರುಚಿಗೆ ಮನೆಮಾತಾಗಿತ್ತು. ಈಚೆಗೆ ವಯೋಸಹಜ ಅನಾರೋಗ್ಯದಿಂದ ಬಳಲುತ್ತಿದ್ದ ಅವರು ಮನೆಯಲ್ಲಿ ಮೃತರಾಗಿದ್ದಾರೆ. ಅವರಿಗೆ ಪತ್ನಿ, ಇಬ್ಬರು ಪುತ್ರರು ಇದ್ದಾರೆ. ಶುಕ್ರವಾರ ಬಿಟ್ಟಗೌಡನಹಳ್ಳಿ ಚಿತಾಗಾರದಲ್ಲಿ ಅಂತ್ಯಸಂಸ್ಕಾರ ಜರುಗಲಿದೆ.

# ಪಿಒಪಿ ಗಣೇಶ ಮೂರ್ತಿಗಳಿಗೆ ಕಡಿವಾಣ ಹಾಕಿ

## ಈಗಿನಿಂದಲೇ ಅರಿವು ಮೂಡಿಸಿ | ಮಹಾನಗರ ಪಾಲಿಕೆಗೆ ಪರಿಸರವಾದಿಗಳ ಒತ್ತಾಯ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ಹಿಂದೂಗಳ ಪ್ರಮುಖ ಧಾರ್ಮಿಕ ಆಚರಣೆಗಳಲ್ಲಿ ಒಂದಾದ ಗಣೇಶೋತ್ಸವಕ್ಕೆ ದಿನಗಣನೆ ಶುರುವಾಗಿದ್ದು ಪರಿಸರ ಸಂರಕ್ಷಣೆ ದೃಷ್ಟಿಯಿಂದ ಪಿಒಪಿ (ಪ್ಲಾಸ್ಟರ್ ಆಫ್ ಪ್ಯಾರಿಸ್) ಗಣೇಶ ಮೂರ್ತಿಗಳಿಗೆ ಕಡಿವಾಣ ಹಾಕಬೇಕೆಂದು ಪರಿಸರ ಪ್ರೇಮಿಗಳು ಆಗ್ರಹಿಸಿದ್ದಾರೆ.

ಆಗಸ್ಟ್ 27 ರಂದು ಗಣೇಶ ಮೂರ್ತಿ ಪ್ರತಿಷ್ಠಾಪನೆ ಮಾಡಲಾಗುತ್ತದೆ. ಈ ಹಿನ್ನೆಲೆಯಲ್ಲಿ ನಗರ ಸೇರಿ ಜಿಲ್ಲಾದ್ಯಂತ ಆರಂಭಿಕ ಹಂತವಾಗಿ ಮುಹೂರ್ತ ಸ್ತಂಭ ಹಾಗೂ ಮೃತ್ತಿಕಾ ಪೂಜೆಯನ್ನು ಕೆಲವೆಡೆ ನೆರವೇರಿಸಲಾಗಿದೆ. ಗಣೇಶ ಮೂರ್ತಿ ವ್ಯಾಪಾರಿಗಳು ಈಗಾಗಲೇ ಹೊರ ಜಿಲ್ಲೆ ಹಾಗೂ ರಾಜ್ಯಗಳಿಂದ ಮೂರ್ತಿಗಳನ್ನು ಖರೀದಿಸಿ ತರುತ್ತಿದ್ದಾರೆ. ಪರಿಸರ ಸಂರಕ್ಷಣೆ ದೃಷ್ಟಿಯಿಂದ ಈಗಲೇ ಈ ಬಗ್ಗೆ ಜಾಗೃತಿ ಮೂಡಿಸಬೇಕು. ಪರಿಸರಕ್ಕೆ ಹಾನಿಯುಂಟು ಮಾಡುವ ಪಿಒಪಿ ಮೂರ್ತಿಗಳ ಮಾರಾಟ ನಿಷೇಧ ಕುರಿತು ಹೆಚ್ಚಿನ ಪ್ರಚಾರ ಮಾಡಬೇಕು. ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಕಠಿಣ ಕ್ರಮ ಜಾರಿಯಾದರೆ ಗ್ರಾಮೀಣ ಭಾಗದಲ್ಲೂ ಜನರು ಎಚ್ಚೆತ್ತುಕೊಳ್ಳುತ್ತಾರೆಂಬುದು ಸಾರ್ವಜನಿಕರ ಸಲಹೆಯಾಗಿದೆ.



> ಪಿಒಪಿ ಗಣೇಶ ಮೂರ್ತಿಗಳಿಂದ ಪರಿಸರದ ಮೇಲೆ ದುಷ್ಪರಿಣಾಮ ಬೀರುತ್ತದೆ. ಮೊದಲೇ ಕೆರೆಕಟ್ಟೆಗಳು ಕಲುಷಿತಗೊಂಡಿದ್ದು ಭವಿಷ್ಯದ ಪೀಳಿಗೆಗೆ ಒಳ್ಳೆಯ ಪರಿಸರ ನೀಡಬೇಕೆಂದರೆ ಎಚ್ಚೆತ್ತುಕೊಳ್ಳಬೇಕು. ಗಣೇಶ ಮೂರ್ತಿ ವ್ಯಾಪಾರಿ ಹಾಗು ಕಲಾವಿದರಿಗೆ ಈ ಬಗ್ಗೆ ಎಚ್ಚರಿಕೆ ನೀಡಿದರೆ ಅನುಕೂಲವಾಗುತ್ತದೆ.
>
> **– ಹೆಚ್.ಎಂ. ರಕ್ಷಿತ್, ಪಾಲಿಕೆ ಸದಸ್ಯ**

### ಮಣ್ಣಿನ ಮೂರ್ತಿ ಪ್ರತಿಷ್ಟಾಪಿಸಿ

ಶುದ್ಧ ಮಣ್ಣಿನಿಂದ ತಯಾರಿಸಿದ ಮೂರ್ತಿಗಳು ನೀರಿನಲ್ಲಿ ಕರಗಿ ಪರಿಸರಕ್ಕೆ ಪೂರಕವಾಗಿರುತ್ತವೆ. ಈ ಬಗ್ಗೆ ಅರಿವು ಹೊಂದಿರುವ ಅನೇಕರು ಮಣ್ಣಿನಿಂದ ತಯಾರಾದ ಗಣೇಶ ಮೂರ್ತಿಗಳಿಗೆ ಆದ್ಯತೆ ನೀಡುತ್ತಾರೆ. ಆದರೆ ಬಹುತೇಕರು ಇನ್ನು ಎಚ್ಚೆತ್ತುಕೊಂಡಿಲ್ಲ. ಈಗಿನಿಂದಲೇ ಅಧಿಕಾರಿಗಳು ಗಮನ ಹರಿಸದರೆ ಹೆಚ್ಚಿನ ಅನಾಹುತ ತಡೆಯಬಹುದು.


ಪಿಒಪಿ ಗಣಪತಿ ವಿಗ್ರಹ ಪ್ರತಿಷ್ಟಾಪಿಸಬಾರದೆಂದು ಪರಿಸರ ಇಲಾಖೆ ಹಾಗೂ ಸರ್ಕಾರ ಆದೇಶ ಮಾಡಿದೆ. ತಪ್ಪಿತಸ್ಥರಿಗೆ ದಂಡವನ್ನೂ ವಿಧಿಸಲಾಗುತ್ತದೆ. ಆದರೆ ಮೂರ್ತಿ ತಯಾರಿ ಅಥವಾ ಖರೀದಿ ಮಾಡುವ ಮೊದಲೇ ಎಚ್ಚರಿಕೆ ನೀಡಿದರೆ ಅನುಕೂಲವಾಗುತ್ತದೆ. ಗಣೇಶೋತ್ಸವ ಆರಂಭದ ಹಂತದಲ್ಲಿ ಮಾರುಕಟ್ಟೆಯಲ್ಲಿ ದಾಳಿ ನಡೆಸಿ ವ್ಯಾಪಾರಿಗಳನ್ನು ಸಂಕಷ್ಟಕ್ಕೆ ಸಿಲುಕಿಸುವ ಬದಲು ಈಗಿನಿಂದಲೇ ಪಾಲಿಕೆ ಕಾರ್ಯ ಪ್ರವೃತ್ತವಾಗಬೇಕೆಂಬುದು ಒತ್ತಾಯವಾಗಿದೆ.

ಕ್ಯಾಲ್ಸಿಯಂ ಸಲ್ಫೇಟ್ ಹೆಮಿ ಹೈಡ್ರೇಟ್ ರಾಸಾಯನಿಕದಿಂದ ಮೂರ್ತಿಗಳನ್ನು ತಯಾರಿಸಲಾಗುತ್ತದೆ. ಇದು ಸಣ್ಣ ಸಮಯದಲ್ಲಿ ಬಿಗಿಯಾಗುವ ಗುಣ ಹೊಂದಿರುವುದರಿಂದ ಮೂರ್ತಿಗಳನ್ನು ತಯಾರಿಸಲು ಸುಲಭವಾಗಿರುತ್ತದೆ. ಮೂರ್ತಿಗಳ ಸೌಂದರ್ಯವೂ ಹೆಚ್ಚುವುದರಿಂದ ಹೆಚ್ಚಿನ ಕಲಾವಿದರು ಪಿಒಪಿ ಮೊರೆ ಹೋಗುತ್ತಾರೆ.

ಈ ಮೂರ್ತಿಗಳು ನೀರಿನಲ್ಲಿ ಕರಗುವುದಿಲ್ಲ. ಕೆರೆ, ಬಾವಿಗಳಲ್ಲಿ ವಿಸರ್ಜಿಸಿದಾಗ ಅವು ನೀರಿನಲ್ಲಿ ದೀರ್ಘಕಾಲ ಉಳಿದು, ಜಲಮೂಲಗಳನ್ನು ಮಾಲಿನ್ಯಗೊಳಿಸುತ್ತವೆ. ಬಣ್ಣಗಳಲ್ಲಿರುವ ಭಾರೀ ಲೋಹಗಳು (ಸೀಸ, ಕಾಡ್ಮಿಯಂ) ಮೀನು ಹಾಗೂ ಮತ್ತಿತರ ಜಲಚರ ಜೀವಿಗಳಿಗೆ ವಿಷಕಾರಿಯಾಗಿ ಪ್ರಾಣಕ್ಕೆ ಕುತ್ತು ತರುತ್ತವೆ. ಅದು ಮಣ್ಣಿನ ಮೇಲೆ ಕೆಟ್ಟ ಪರಿಣಾಮ ಬೀರುವುದರಿಂದ ಭವಿಷ್ಯದ ದಿನಗಳಲ್ಲಿ ಕೃಷಿ ಚಟುವಟಿಕೆಗೂ ತೊಡಕಾಗುತ್ತದೆ.

ಪಿಒಪಿ ಗಣೇಶ ಮೂರ್ತಿಗಳು ಪರಿಸರಕ್ಕೆ ಮಾತ್ರವಲ್ಲದೆ ಮಾನವನ ಜೀವಕ್ಕೂ ತೊಂದರೆ ಮಾಡುತ್ತದೆ. ಧೂಳಿನಿಂದ ಉಸಿರಾಟದ ಸಮಸ್ಯೆಗಳು, ಅಸ್ತಮಾ ಹಾಗೂ ಚರ್ಮದ ಅಲರ್ಜಿ ಉಂಟಾಗಬಹುದು. ಕೆಲವು ಮೂರ್ತಿಗಳ ಬಣ್ಣಗಳಲ್ಲಿ ಲೀಡ್ ಹಾಗೂ ಮರ್ಕ್ಯುರಿ ಇರುವ ಕಾರಣ ಶ್ವಾಸಕೋಶದ ತೊಂದರೆಗೆ ಎಡೆಮಾಡಿಕೊಡಬಹುದು.

# ಶಾಂತಿಸಾಗರ ಮುನಿ ಮಹಾರಾಜರ ಸ್ಮರಣೆ



ಹಾಸನ: ಶಾಂತಿಸಾಗರ ಮುನಿ ಮಹಾರಾಜರ ಜೀವನ ತತ್ವ, ಆದರ್ಶ ಹಾಗೂ ಉಪದೇಶವನ್ನು ಜೀವನದಲ್ಲಿ ಅಳವಡಿಸಿಕೊಂಡು ಜನ್ಮವನ್ನು ಸಾರ್ಥಕ ಪಡಿಸಿಕೊಂಡಾಗ ಸ್ಮರಣೆಗೆ ಮೌಲ್ಯ ಬರುತ್ತದೆ ಎಂದು ಶ್ರವಣಬೆಳಗೊಳ ಜೈನಮಠದ ಪೀಠಾಧ್ಯಕ್ಷ ಸ್ವಸ್ತಿಶ್ರೀ ಮದಭಿನವ ಚಾರುಕೀರ್ತಿ ಪಂಡಿತಾಚಾರ್ಯವರ್ಯ ಭಟ್ಟಾರಕ ಸ್ವಾಮೀಜಿ ತಿಳಿಸಿದರು.

ನಗರದ ಮಹಾವೀರ ಭವನದಲ್ಲಿ ದಿಗಂಬರ ಜೈನ ಸಾಹಿತ್ಯ ಮತ್ತು ಸಂಸ್ಕೃತಿಕ ವೇದಿಕೆ ಮತ್ತು ಜೈನ ಸಮಾಜದ ವತಿಯಿಂದ ಚಾರಿತ್ರ್ಯ ಚಕ್ರವರ್ತಿ ಆಚಾರ್ಯ 108 ಶಾಂತಿಸಾಗರ ಮುನಿ ಮಹಾರಾಜರ 153ನೇ ಜಯಂತಿ ಮಹೋತ್ಸವ ಕಾರ್ಯಕ್ರಮದ ಸಾನಿಧ್ಯ ವಹಿಸಿ ಮಾತನಾಡಿ, ಪಂಥ ಭೇದ ಮಾಡದೆ ಮುನಿಪರಂಪರೆಯ ಎಲ್ಲಾ ದಿಗಂಬರ ಮುನಿಗಳ ಸೇವೆ ಮಾಡುವ ಮೂಲಕ ನಾವೆಲ್ಲ ಆಚಾರ್ಯ ಶಾಂತಿಸಾಗರರ ಉಪಕಾರದ ಋಣ ತೀರಿಸಬೇಕೆಂದು ಹೇಳಿದರು.

ಸಮಿತಿ ಸದಸ್ಯರು ಹಾಗು ಜೈನ ಸಮಾಜದ ಶ್ರಾವಕ-ಶ್ರಾವಕಿಯರು ಭಾಗಿಯಾಗಿ ಸ್ವಾಮೀಜಿ ಪಾದಪೂಜೆ ನೆರವೇರಿಸಿದರು. ಮಂಗಳೂರು ಎಜುಕೇಷನಲ್ ಚಾರಿಟಬಲ್ ಎಂಎಸ್‌ಸಿ-ಯೋಗ ಅಧ್ಯಕ್ಷರಾದ ಎಂ.ಎ.ಚಂದ್ರರಾಜ್, ದಿಗಂಬರ ಜೈನ ಸಾಹಿತ್ಯ ಮತ್ತು ಸಂಸ್ಕೃತಿ ವೇದಿಕೆ ಅಧ್ಯಕ್ಷ ಹೆಚ್.ಎನ್.ಅಭಿನಂದನ್, ಕಾರ್ಯದರ್ಶಿ ಹೆಚ್.ಕೆ.ಜೀವೇಂದ್ರ, ಹಾಸನ ಜೈನ ಸಂಘದ ಅಧ್ಯಕ್ಷ ಹೆಚ್.ಬಿ.ಶಾಂತೀಶ್ ಹಾಜರಿದ್ದರು.

# ಮೌಢ್ಯ, ಕಂದಾಚಾರದಿಂದ ಹೊರಬನ್ನಿ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಬಡ ಮಕ್ಕಳು, ಅನಾಥರು ಹಾಗೂ ಆಸ್ಪತ್ರೆಯಲ್ಲಿನ ಬಡ ರೋಗಿಗಳಿಗೆ ಹಾಲು ಹಂಚುವ ಮೂಲಕ ಮಾನವ ಬಂಧುತ್ವ ವೇದಿಕೆಯ ತಂಡ ಅರ್ಥಪೂರ್ಣವಾಗಿ ನಾಗರ ಪಂಚಮಿ ಹಬ್ಬ ಆಚರಿಸುತ್ತಿದೆ ಎಂದು ಕನ್ನಡ ಸಾಹಿತ್ಯ ಪರಿಷತ್ ತಾಲ್ಲೂಕು ಗೌರವ ಕಾರ್ಯದರ್ಶಿ ಬಿ.ಬಿ. ಶಿವರಾಜು ಹೇಳಿದರು.

ಪಟ್ಟಣದ ಸರ್ಕಾರಿ ಮಹಿಳಾ ಪದವಿ ಪೂರ್ವ ಕಾಲೇಜಿನಲ್ಲಿ ಬಸವ ಪಂಚಮಿ ಅಂಗವಾಗಿ ಹಮ್ಮಿಕೊಂಡಿದ್ದ ಬಸವ ಪಂಚಮಿ ಕಾರ್ಯಕ್ರಮದಲ್ಲಿ ಸಂವಿಧಾನದ ಪೀಠಿಕೆ ಓದಿಸುವ ಮೂಲಕ ಉದ್ಘಾಟನೆ ನಡೆಸಿ ಮಾತನಾಡಿದ ಅವರು, ಮೂಢನಂಬಿಕೆಯಿಂದ ಹೊರ ಬರಬೇಕಾಗಿದೆ. ಈ ನಿಟ್ಟಿನಲ್ಲಿ ತಾಲ್ಲೂಕು ಮಾನವ ಬಂಧುತ್ವ ವೇದಿಕೆ ಅರಿವು ಮೂಡಿಸುತ್ತಿರುವುದು ಶ್ಲಾಘನೀಯ. ಅಮೂಲ್ಯ ಪೌಷ್ಟಿಕ ಆಹಾರವಾಗಿರುವ ಹಾಲನ್ನು ಚೆಲ್ಲಿ ವ್ಯರ್ಥ ಮಾಡುವುದು ನಾಗರಿಕರ ಲಕ್ಷಣವಂತೂ ಖಂಡಿತ ಅಲ್ಲ. ಮನುಷ್ಯ ತನ್ನ ಬುದ್ದಿವಂತಿಕೆ ವಿವೇಚನಾ ಶಕ್ತಿಯನ್ನು ಉಪಯೋಗಿಸಬೇಕು. ಸಂಪ್ರದಾಯವಾದಿಗಳು ಬಿತ್ತಿದ ಮೌಢ್ಯಗಳಿಂದ ಹೊರಬರಬೇಕು. ಇಂದಿಗೂ ದೇಶದ ಅಸಂಖ್ಯಾತ ಮಕ್ಕಳು ಅಪೌಷ್ಟಿಕತೆಯಿಂದ ಬಳಲುತ್ತಿದ್ದಾರೆ. ದೇಶವು ಜಾಗತಿಕ ಹಸಿವಿನ ಸೂಚ್ಯಂಕದಲ್ಲಿ ಬಹಳ ಹೀನಾಯ ಸ್ಥಿತಿಯಲ್ಲಿದೆ. ಇಂತಹ ಸಂದರ್ಭದಲ್ಲಿ ದೇಶದ ಪ್ರಜ್ಞಾವಂತ ನಾಗರಿಕರು ಕೆಲವು ಧಾರ್ಮಿಕ ಮೌಢ್ಯಗಳಿಗೆ ಬಲಿಯಾಗಬಾರದು.





ಪಂಚಮಿ ಹಬ್ಬದಂದು ಕಲ್ಲಿನ ನಾಗರಕ್ಕೆ ಹಾಲೆರೆದು ವ್ಯರ್ಥ ಮಾಡುವ ಬದಲಿಗೆ ಅದೇ ಹಾಲನ್ನು ಅನಾಥಾಶ್ರಮದ ಅಥವಾ ಬಡ ವಿದ್ಯಾರ್ಥಿಗಳಿರುವ ವಸತಿ ಗೃಹ ಅಥವಾ ಶಾಲೆಗಳ ಮಕ್ಕಳಿಗೆ ವಿತರಿಸುವ ಮೂಲಕ ಪಂಚಮಿ ಹಬ್ಬವನ್ನು ಸಂಭ್ರಮಿಸಬೇಕು ಎಂದರು.

ಮಾನವ ಬಂಧುತ್ವ ವೇದಿಕೆಯ ಮೈಸೂರು ವಿಭಾಗೀಯ ಸಂಚಾಲಕ ಸತೀಶ್ ಮಾತನಾಡಿ, ಪ್ರಬುದ್ಧ ಸಮಾಜ ನಿರ್ಮಾಣಕ್ಕೆ ನಾವು ಹೇಗೆ ಪಾತ್ರವಹಿಸಬೇಕು ಎಂದು ತಿಳಿದುಕೊಳ್ಳಬೇಕು. ವಿಜ್ಞಾನ ಇಂದು ಜಗತ್ತಿನಲ್ಲಿ ದೊಡ್ಡದಾಗಿ ಬೆಳೆಯುತ್ತಿದೆ. ಆದರೆ ಕಂದಾಚಾರ, ಮೌಢ್ಯಗಳನ್ನು ಜೊತೆಗೆ ಬೆಳೆಸುವ ಕೆಲಸ ಆಗುತ್ತಿದೆ. ಕೇವಲ ಪಟ್ಟಣಕ್ಕೆ ಮಾತ್ರ ಮೀಸಲಾಗಿದ್ದ ಮೌಢ್ಯಗಳಿಂದು ಗ್ರಾಮೀಣ ಭಾಗಕ್ಕೆ ಬಂದಿರುವುದು ವಿಪರ್ಯಾಸ. ಅದಕ್ಕಾಗಿ ಮಾನವ ಬಂದುತ್ವ ವೇದಿಕೆಯಿಂದ ಯುವ ಜನಾಂಗದಲ್ಲಿ ಪರಿಪೂರ್ಣ ಸಂಸ್ಕೃತಿಯೊಂದಿಗೆ ಬಸವ ಪಂಚಮಿ ಆಚರಣೆ ಮಾಡುವ ಮೂಲಕ ಯುವಮನಸ್ಸುಗಳಿಗೆ ಸಾಮಾಜಿಕ ಜವಬ್ದಾರಿ ಹಾಗೂ ಮೌಲ್ಯಾಧಾರಿತ ಬದುಕಿನ ಸಂದೇಶವನ್ನು ನೀಡುವ ಸಲುವಾಗಿ ಇಂತಹ ಕಾರ್ಯಕ್ರಮ ಆಯೋಜಿಸಲಾಗುತ್ತದೆ ಎಂದರು.

ಸೌಭಾಗ್ಯ ಅಂತೋಣಿ ಸ್ವಾಮಿ, ಪ್ರಾಂಶುಪಾಲ ಚಂದ್ರಶೇಖರ್, ದಸಂಸ ವಿಭಾಗೀಯ ಸಂಚಾಲಕ ಬಿ.ಎಲ್. ಲಕ್ಷ್ಮಣ್, ಶೇಷಪ್ಪ, ಲಿಖಿತ್, ರಂಜೀತ್, ರಂಗಸ್ವಾಮಿ, ನೂರ್ ಅಹಮದ್, ಚಂದ್ರು, ನಿಂಗರಾಜು ಇತರರು ಇದ್ದರು.

# ಸಕಲೇಶಪುರ ಕರವೇ ಪದಾಧಿಕಾರಿಗಳ ಸಭೆ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಸಕಲೇಶಪುರ: ತಾಲ್ಲೂಕಿನಲ್ಲಿ ಕರ್ನಾಟಕ ರಕ್ಷಣಾ ವೇದಿಕೆಯನ್ನು ಬಲಪಡಿಸುವ ಉದ್ದೇಶದಿಂದ ಕೈಗೊಳ್ಳಬೇಕಾದ ಕ್ರಮಗಳು ಹಾಗೂ ನೂತನ ಕಾರ್ಯಕರ್ತರ ಸೇರ್ಪಡೆ ಕಾರ್ಯಕ್ರಮವನ್ನು ಸಂಘದ ಕಚೇರಿಯಲ್ಲಿ ಗುರುವಾರ ಹಮ್ಮಿಕೊಳ್ಳಲಾಗಿತ್ತು.

ತಾಲ್ಲೂಕು ಕರವೇ ಅಧ್ಯಕ್ಷ ಗಗನ್ ಹಾಡ್ಲಹಳ್ಳಿ ಮಾತನಾಡಿ, ನೂತನ ಘಟಕ ಉದ್ಘಾಟನೆಯಾಗಿ ಮೂರು ತಿಂಗಳು ಆಗಿದೆ. ಎಲ್ಲಾ ಪದಾಧಿಕಾರಿಗಳು ಸಂಘಟನೆ ಬಲಪಡಿಸುವ ನಿಟ್ಟಿನಲ್ಲಿ ಕ್ರಿಯಾಶೀಲರಾಗಿದ್ದಾರೆ. ಮುಂದಿನ ದಿನಗಳಲ್ಲಿ ತಾಲ್ಲೂಕಿನ ಪ್ರತಿ ಗ್ರಾಮ ಪಂಚಾಯಿತಿಯ ಮಟ್ಟದಲ್ಲಿ ಸಂಘಟನೆಯನ್ನು ಬಲಪಡಿಸುವ ಮೂಲಕ ನಾಡು, ನುಡಿ, ಭಾಷೆ, ಜಲಕ್ಕಾಗಿ ಪ್ರಾಮಾಣಿಕ ಹೋರಾಟ ಮಾಡಲಾಗುವುದು ಎಂದರು.

ಕರವೇ ರಾಜ್ಯಾಧ್ಯಕ್ಷ ನಾರಾಯಣಗೌಡ ಅವರ ಯೋಚನೆಯಂತೆ ಪ್ರತಿ ಜಿಲ್ಲೆಯಲ್ಲಿ ಸಾವಿರ ಸ್ವಯಂ ಸೇವಕರನ್ನು ಸಿದ್ದಪಡಿಸುವ ಕಾರ್ಯಕ್ಕೆ ನಮ್ಮ ತಾಲ್ಲೂಕಿನಿಂದ ಅತಿ ಹೆಚ್ಚು ಸ್ವಯಂ ಸೇವಕರನ್ನು ಸಿದ್ಧಗೊಳಿಸಲಾಗುವುದು. ಮುಂದಿನ ದಿನಗಳಲ್ಲಿ ತಾಲೂಕಿನ ಜ್ವಲಂತ ಸಮಸ್ಯೆಗಳಾದ ಕಾಡಾನೆ ಸಮಸ್ಯೆ, ರಾಷ್ಟ್ರೀಯ ಹೆದ್ದಾರಿ ಹಾಗೂ ಪಟ್ಟಣದ ಮಧ್ಯದಲ್ಲಿ ಕಸದ ಸಮಸ್ಯೆ ಸೇರಿದಂತೆ, ಹಳೆ ಬಸ್ ನಿಲ್ದಾಣದಲ್ಲಿ ಪ್ರಯಾಣಿಕರ ತಂಗುದಾಣದ ವ್ಯವಸ್ಥೆಯ ಬಗ್ಗೆ ಸಂಘಟನೆ ಪ್ರಾಮಾಣಿಕವಾಗಿ ಹೋರಾಟ ಮಾಡಲಾಗುವುದು. ಇದಕ್ಕೆ ಎಲ್ಲರ ಕಾರ್ಯಕರ್ತರ ಬೆಂಬಲ ಅವಶ್ಯಕತೆ ಇದೆ ಎಂದು ಹೇಳಿದರು.





ಸಕಲೇಶಪುರ, ಆಲೂರು ಉಸ್ತುವಾರಿ ಹಾಗೂ ಜಿಲ್ಲಾ ಕಾರ್ಯದರ್ಶಿಯಾದ ರಘು ಪಾಳ್ಯ ಮಾತನಾಡಿ ನಮ್ಮ ಕ.ರ.ವೇ ರಾಜ್ಯಾಧ್ಯಕ್ಷ ನಿರ್ಣಯದಂತೆ ಪ್ರತಿ ಜಿಲ್ಲೆಯಿಂದ ಸಾವಿರ ಸ್ವಯಂ ಸೇವಕರ ಪಡೆಯನ್ನು ಕಟ್ಟಿ ನಮ್ಮ ತಾಲೂಕಿನ ನಾಡು, ನುಡಿಗೆ ದಕ್ಕೆ ಉಂಟಾದಾಗ ಹೋರಾಟ ಮಾಡುವ ಕೆಲಸ ಮಾಡಲಾಗುವುದು. ಈ ನಿಟ್ಟಿನಲ್ಲಿ ನಮ್ಮ ತಾಲ್ಲೂಕಿನಲ್ಲಿ ಸ್ವಯಂ ಕಾರ್ಯಕರ್ತರ ಪಡೆಯನ್ನು ಸಿದ್ದ ಮಾಡಲಾಗಿದೆ. ಈ ನಿಟ್ಟಿನಲ್ಲಿ ಮುಂದಿನ ದಿನಗಳಲ್ಲಿ ಸಂಘಟನೆ ಯಾವ ರೀತಿ ಬಲಪಡಿಸಬೇಕು ಎಂಬುದನ್ನು ಹೇಳಿದರು. ಕ.ರ.ವೇ ಮಹಿಳಾ ಘಟಕ ಶೋಭಾ ಮಾತನಾಡಿ ಮುಂದಿನ ದಿನಗಳಲ್ಲಿ ತಾಲ್ಲೂಕಿನಲ್ಲಿ ಮಹಿಳಾ ಸಂಘಟನೆಯನ್ನು ಬಲಿಷ್ಠವಾಗಿ ಕಟ್ಟುವ ಮೂಲಕ ತಾಲ್ಲೂಕಿನಲ್ಲಿ ನಾಡು ನುಡಿ ಗೋಸ್ಕರ ಹೋರಾಟ ಮಾಡಗುವುದು. ನಮಗೆ ಸಿಕ್ಕ ಜೀವನದಲ್ಲಿ ಸ್ವಲ್ಪ ಸಮಯದಲ್ಲಿ ನಾಡು ನುಡಿಗಾಗಿ ಸಮಯ ಮಿಸಲಿಡಬೇಕು. ಆದ್ದರಿಂದ ನಾವು ಸಂಘಟನೆ ಮೂಲಕ ಸಂಘಟರಾಗಬೇಕು ಎಂದರು.

ಕ.ರ.ವೇ ತಾಲೂಕು ರೈತ ಘಟಕದ ಅಧ್ಯಕ್ಷರಾದ ವಸಂತ್ ಬೊಮ್ಮನಕೆರೆ ಮಾತನಾಡಿ ಕ.ರ.ವೇ ಹೋರಾಟದ ಮೂಲಕ ಅನೇಕ ಅಭಿವೃದ್ಧಿ ಕೆಲಸಗಳನ್ನು ಗ್ರಾಮಪಂಚಾಯಿತಿ ವ್ಯಾಪ್ತಿಯಲ್ಲಿ ಮಾಡಲಾಗುತ್ತಿದೆ. ತಾಲ್ಲೂಕು ಅಧ್ಯಕ್ಷರಾದ ಗಗನ್ ಅವರ ಅಧ್ಯಕ್ಷತೆಯಲ್ಲಿ ನಾಡು ನುಡಿ ಕಟ್ಟುವ ಮೂಲಕ ಕೆಲಸ ಮಾಡೋಣ ಎಂದರು.

ಕಾರ್ಯಕ್ರಮದಲ್ಲಿ ಸಂಘಟನೆಯ ತತ್ವ ಸಿದ್ಧಾಂತಗಳನ್ನು ಒಪ್ಪಿ ಹೆಚ್ಚಿನ ಸಂಖ್ಯೆ ಕಾರ್ಯಕರ್ತರು ಸೇರ್ಪಡೆ ಯಾದರು ಹಾಗೂ ತಾಲೂಕು ಕಾರ್ಮಿಕ, ರೈತ ಹಾಗೂ ವಿದ್ಯಾರ್ಥಿ ಘಟಕದ ಕೆಲವು ಜವಾಬ್ದಾರಿಗಳನ್ನು ನೀಡಲಾಯಿತು.

ಕಾರ್ಯಕ್ರಮದಲ್ಲಿ ತಾಲ್ಲೂಕು ಕ.ರ.ವೇ ಎಲ್ಲಾ ಘಟಕದ ಅಧ್ಯಕ್ಷರು ಹಾಗೂ ಪದಾಧಿಕಾರಿಗಳು ಸೇರಿದಂತೆ ಹೆಚ್ಚಿನ ಸಂಖ್ಯೆಯ ಕಾರ್ಯಕರ್ತರು ಉಪಸ್ಥಿತರಿದ್ದರು.

# ಇತಿಹಾಸದಲ್ಲಿ ಈ ದಿನ

## ಆಗಸ್ಟ್-1

1920: ಮಹಾತ್ಮ ಗಾಂಧೀಜಿ ನೇತೃತ್ವದಲ್ಲಿ ಅಸಹಕಾರ ಚಳವಳಿ ಆರಂಭವಾಯಿತು. ಬ್ರಿಟಿಷ್ ಸರ್ಕಾರದ ವಿರುದ್ಧ ಜನಾಂಗೀಯ ಶಾಂತಿಪೂರ್ಣ ಪ್ರತಿಭಟನೆಯ ಪ್ರಮುಖ ಹಂತ ಇದಾಗಿತ್ತು.

1953: ಅಂಧ್ರ ರಾಜ್ಯದ ರಚನೆಗೆ ಕೇಂದ್ರ ಸರ್ಕಾರ ಅನುಮೋದನೆ ನೀಡಿತು. ಇದು ಭಾಷಾವಾರು ಪ್ರಾಂತ್ಯಗಳ ರಚನೆಯ ದಿಕ್ಕಿನಲ್ಲಿ ಮೊದಲ ಹೆಜ್ಜೆಯಾಯಿತು.

1981: ಭಾರತೀಯ ಕ್ರಾಂತಿಕಾರಿ ನಾಯಕ ಉದಾಂ ಸಿಂಗ್ ಅವರನ್ನು ಗೌರವಿಸಲು ಪಂಜಾಬ್‌ನಲ್ಲಿ ಅವರ ಜನ್ಮ ದಿನದ ಅಂಗವಾಗಿ ವಿಶೇಷ ಕಾರ್ಯಕ್ರಮ ನಡೆಯುತ್ತವೆ.

1774: ಬ್ರಿಟಿಷ್ ಸಂಸತ್ತಿನಲ್ಲಿ Année terrible" ಕಾಲಘಟ್ಟದ laws ಅಂಗೀಕರಿಸಲಾಯಿತು. ಇದು ಅಮೆರಿಕದ ಸ್ವಾತಂತ್ರ್ಯ ಸಮರದ ಒಂದು ಪ್ರೇರಕ ಘಟಕವಾಗಿತ್ತು.

1834: ಬ್ರಿಟಿಷ್ ಸಾಮ್ರಾಜ್ಯದಲ್ಲಿ ಗುಲಾಮಗಿರಿ ನಿರ್ಬಂಧಿಸಲಾಗಿದೆ (Slavery Abolition Act enforcement). ಇದು ದಕ್ಷಿಣ ಆಫ್ರಿಕಾದಂತಹ ಪ್ರದೇಶಗಳಲ್ಲಿ ಮಹತ್ವದ ಪರಿಣಾಮ ಬೀರುವಂತಾಗಿತ್ತು.

1981: ಎಂ.ಟಿ.ವಿ. (MTV – Music Television ) ಅಮೆರಿಕಾದಲ್ಲಿ ಪ್ರಾರಂಭವಾಯಿತು. ಇದು ಪಾಪ್ ಸಂಸ್ಕೃತಿಯ ಮೇಲೆ ಆಳವಾದ ಪ್ರಭಾವ ಬೀರಿತು.

### ಜನನ

1770: ಮುಕ್ತಾಬಾಯಿ, ಮಹಾರಾಷ್ಟ್ರದ ಪ್ರಸಿದ್ಧ ವರ್ತಮಾನದ ಸಂತ, ಕವಿ ಹಾಗೂ ಸಮಾಜ ಸುಧಾರಕಿ.

1882: ಧನರಾಜ್ ಗಿರಿ, ಭಾರತೀಯ ತತ್ವಜ್ಞಾನಿ ಮತ್ತು ಶಿಕ್ಷಣ ತಜ್ಞ, ಕಾಶಿಯ ಹಿಂದು ವಿಶ್ವವಿದ್ಯಾಲಯದ ಬೆಳವಣಿಗೆಗೆ ಪ್ರಾಮುಖ್ಯ ಕೊಡುಗೆ.

1924: ಜಯಂತ್ ನಾಯ್ಕ, ಭಾರತೀಯ ಸ್ವಾತಂತ್ರ್ಯ ಹೋರಾಟಗಾರ ಮತ್ತು ಸಮಾಜ ಸೇವಕ.

1932: ಮೀನಾ ಕುಮಾರಿ, ಪ್ರಸಿದ್ಧ ಬಾಲಿವುಡ್ ನಟಿ, ಟ್ರಾಜೆಡಿ ಕ್ವೀನ್ ಎಂಬ ಹೆಸರಿನಿಂದ ಖ್ಯಾತಿ ಪಡೆದವರು.

1819: ಹರ್ಮನ್ ಮೆಲ್ವಿಲ್, ಅಮೆರಿಕದ ಪ್ರಸಿದ್ಧ ಸಾಹಿತಿ, ಮೊಬಿ ಡಿಕ್ ಕಾದಂಬರಿಯ ರಚನೆಕಾರ.

### ಮರಣ

1941: ರವೀಂದ್ರನಾಥ ಟಾಗೋರ್, ಭಾರತದ ಖ್ಯಾತ ಕವಿ

1996: ಆಚಾರ್ಯ ನಂದದೂಲಾಲ ದಾಸ್, ಸಂಸ್ಕೃತ ಪಂಡಿತ ಹಾಗೂ ಶಿಕ್ಷಣ ತಜ್ಞ.

1714: ಕ್ವೀನ್ ಆನ್ ಇಂಗ್ಲೆಂಡ್‌ನ ರಾಣಿ, ಬ್ರಿಟಿಷ್ ರಾಜಕೀಯದ ಪರಿವರ್ತನೆಯ ಪ್ರಮುಖ ಪಾತ್ರಧಾರಿ.

1944: ಅನ್ನ ಫ್ರಾಂಕ್ ಪ್ರಸಿದ್ಧ ಯಹೂದಿ ಬಾಲಕಿ ಮತ್ತು ಡೈರೀ ಲೇಖಕಿ ಹಾಗೂ ಹಿಟ್ಲರ್ ಕಾಲದ ಬಲಾತ್ಕಾರದ ಪೀಡಿತೆ.

# ಹಾಸ್ಟೆಲ್‌ಗಳಿಗೆ ಸೌಲಭ್ಯ ಕಲ್ಪಿಸಲು ಎಬಿವಿಪಿ ಪ್ರತಿಭಟನೆ





ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಹಾಸನ: ವಿದ್ಯಾರ್ಥಿ ನಿಲಯಗಳಿಗೆ ಸೌಲಭ್ಯ ಕಲ್ಪಿಸಿ ವಿದ್ಯಾರ್ಥಿ ವೇತನ ಬಿಡುಗಡೆ ಮಾಡುವಂತೆ ಒತ್ತಾಯಿಸಿ ಎಬಿವಿಪಿಯಿಂದ ಜಿಲ್ಲಾಧಿಕಾರಿ ಕಚೇರಿ ಎದುರು ಪ್ರತಿಭಟನೆ ನಡೆಯಿತು.

ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಇಲಾಖೆ ವ್ಯಾಪ್ತಿಯಲ್ಲಿ 1,258 ಹಾಸ್ಟೆಲ್‌ಗಳಿದ್ದು 1,68,833 ವಿದ್ಯಾರ್ಥಿಗಳು ವಸತಿ ನಿಲಯಗಳಲ್ಲಿ ವಾಸವಿದ್ದಾರೆ. ಸಮಾಜ ಕಲ್ಯಾಣ ಇಲಾಖೆಯ ವ್ಯಾಪ್ತಿಯಲ್ಲಿ 1,972 ವಸತಿ ನಿಲಯಗಳಿದ್ದು 1,87,200 ವಿದ್ಯಾರ್ಥಿಗಳಿಗೆ ವಸತಿ ನಿಲಯಗಳಲ್ಲಿ ಉಳಿಯಲು ಅವಕಾಶ ನೀಡಬಹುದಾಗಿದೆ. ಆದರೆ ಇವರೆಗೂ ಸಮರ್ಪಕವಾಗಿ ಪ್ರವೇಶಾತಿ ನೀಡಿಲ್ಲ. ಹಾಸ್ಟೆಲ್‌ಗಳಿಗೆ ಮೂಲಭೂತ ಸೌಭಲಭ್ಯ ಕಲ್ಪಿಸಿಲ್ಲ ಎಂದು ಆರೋಪಿಸಿದರು.

ರಾಜ್ಯ ಸರ್ಕಾರ ವಿದ್ಯಾರ್ಥಿಗಳಿಗೆ ವಿದ್ಯಾರ್ಥಿ ವೇತನ ನೀಡದೆ ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ಅನ್ಯಾಯ ಮಾಡುತ್ತಿದೆ. ಕಾರ್ಮಿಕರ ಮಕ್ಕಳ ವಿದ್ಯಾರ್ಥಿ ವೇತನವನ್ನು ಕಡಿತಗೊಳಿಸಿರುವುದು, ವಿದ್ಯಾಸಿರಿ ವಿದ್ಯಾರ್ಥಿ ವೇತನ ಸರಿಯಾಗಿ ಜಮೆಯಾಗದೇ ಇರುವುದು, ರೈತ ವಿದ್ಯಾರ್ಥಿ ವೇತನವನ್ನ ರದ್ದುಗೊಳಿಸಿರುವುದು ಖಂಡಿನೀಯ ಎಂದರು.

ಹಾಸ್ಟೆಲ್‌ಗಳಿಗೆ ಅರ್ಜಿ ಸಲ್ಲಿಸಿದ ವಿದ್ಯಾರ್ಥಿಗಳ ಆಯ್ಕೆ ಪ್ರಕ್ರಿಯೆಯನ್ನು ಕೂಡಲೇ ಪೂರ್ಣಗೊಳಿಸಿ ಹಾಸ್ಟೆಲ್‌ಗಳಿಗೆ ಪ್ರವೇಶಾತಿ ನೀಡಬೇಕು. ವಸತಿ ನಿಲಯಗಳ ವಿದ್ಯಾರ್ಥಿಗಳಿಗೆ ಸರ್ಕಾರ ನೀಡುವ ಕಿಟ್‌ಗಳನ್ನ ತಕ್ಷಣವೇ ಎಲ್ಲಾ ವಿದ್ಯಾರ್ಥಿಗಳಿಗೆ ನೀಡಬೇಕು. ಹಾಸ್ಟೆಲ್‌ಗಳಲ್ಲಿ ಪ್ರತಿ ವಿದ್ಯಾರ್ಥಿಗೆ ಊಟಕ್ಕೆ ನೀಡುವ 1,850 ರೂ. ಹಣವನ್ನು ಹೆಚ್ಚಳ ಮಾಡಬೇಕು. ರಾಜ್ಯದಲ್ಲಿ ಸಮಾಜ ಕಲ್ಯಾಣ ಹಿಂದುಳಿದ ವರ್ಗ ಹಾಗು ಅಲ್ಪಸಂಖ್ಯಾತ ಇಲಾಖೆಗಳ ಹಾಸ್ಟೆಲ್‌ಗಳ ಸಂಖ್ಯೆಯನ್ನು ಹೆಚ್ಚಳ ಮಾಡಬೇಕು. ವಿದ್ಯಾರ್ಥಿಗಳಿಗೆ ಬಾಕಿ ಉಳಿದಿರುವ ಹಿಂದಿನ ವರ್ಷದ ವಿದ್ಯಾರ್ಥಿ ವೇತನವನ್ನು ಜಮೆ ಮಾಡಬೇಕೆಂದು ಆಗ್ರಹಿಸಿದರು.

ಎಬಿವಿಪಿ ಕಾರ್ಯದರ್ಶಿ ಚಿರಂತ್, ಕರ್ನಾಟಕ ದಕ್ಷಿಣ ರಾಜ್ಯ ಕಾರ್ಯದರ್ಶಿ ಪ್ರವೀಣ್, ಲೇಪಾಕ್ಷ ಮತ್ತಿತರರು ಹಾಜರಿದ್ದರು.

# ಅಧಿಕಾರಿಗಳ ಕರ್ತವ್ಯ ಲೋಪಕ್ಕೆ ಶಾಸಕರ ಗರಂ

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ಬಯಲು ಸೀಮೆಗೆ ಏತ ನೀರಾವರಿ ಮೂಲಕ ನೀರು ಹರಿಸುವ ಹಾಲ್ತೋರೆ ಜಾಕವೆಲ್ ಬಳಿ ರಸ್ತೆ ಹಾಗೂ ಮೂಲಸೌಕರ್ಯ ಕಲ್ಪಿಸದೆ ಅಧಿಕಾರಿಗಳು ನಿರ್ಲಕ್ಷ್ಯ ವಹಿಸಿರುವುದು ಖಂಡನೀಯ ಎಂದು ಶಾಸಕ ಹೆಚ್.ಕೆ. ಸುರೇಶ್ ಆಕ್ರೋಶ ವ್ಯಕ್ತಪಡಿಸಿದರು.

ತಾಲ್ಲೂಕಿನ ಹಾಲ್ತೋರೆ ಗ್ರಾಮದ ಬಳಿಯ ಜಾಕ್‌ವೆಲ್ ಮೂಲಕ ಹಳೇಬೀಡು ಮತ್ತು ಮಾದೀಹಳ್ಳಿ ಕೆರೆಗೆ ನೀರು ಹರಿಸಲು ಚಾಲನೆ ನೀಡದ ಬಳಿಕ ಸುದ್ದಿಗಾರೊಂದಿಗೆ ಮಾತನಾಡಿ, 2008ರಲ್ಲಿ ಮುಖ್ಯಮಂತ್ರಿಯಾಗಿದ್ದ ಬಿ.ಎಸ್. ಯಡಿಯೂರಪ್ಪ ಅವರು 15 ಕೋಟಿ ರೂ. ವೆಚ್ಚದಲ್ಲಿ ಯಗಚಿ ಏತ ನೀರಾವರಿ ನಿರ್ಮಾಣವಾಗಿದೆ. ಅಂದಿನಿಂದ ಇಂದಿನ ತನಕ ಜಾಕ್‌ವೆಲ್ ಬಳಿ ರಸ್ತೆ ಹಾಗೂ ಮೂಲಸವಲತ್ತುಗಳನ್ನು ನೀಡಿಲ್ಲ. ಮುಂದಿನ ವರ್ಷದೊಳಗೆ ಕ್ರಿಯಾ ಯೋಜನೆ ತಯಾರಿಸಿ ರಸ್ತೆ ಕಾಮಗಾರಿಯನ್ನು ಪೂರ್ಣಗೊಳಿಸಬೇಕು. ಸರ್ಕಾರದ ಮಹತ್ವಪೂರ್ಣ ಯೋಜನೆಯದಂತಹ ಎತ್ತಿನಹೊಳೆ ಕಾಮಗಾರಿ ಕೂಡ ಬೇಲೂರು ತಾಲ್ಲೂಕಿನಲ್ಲಿ ಅರ್ಧಕ್ಕೆ ನಿಂತಿದ್ದು ಬಂದಂತ ನೀರಿನಿಂದ ಬೆಳೆ ನಾಶವಾಗುತ್ತಿದೆ. ಈ ಬಗ್ಗೆ ಅಧಿಕಾರಿಗಳು ಕ್ರಮ ವಹಿಸಬೇಕು. ಅಲ್ಲದೇ ರಣಘಟ್ಟ ಯೋಜನೆ ಮಂದಗತಿಯಲ್ಲಿ ನಡೆಯುತ್ತಿರುವುದರಿಂದ ಈ ಸಂಬಂಧ ಅಧಿವೇಶನದಲ್ಲಿ ಚರ್ಚಿಸುತ್ತೇನೆ ಎಂದರು.





ಪುಷ್ಪಗಿರಿ ಮಹಾಸಂಸ್ಥಾನ ಮಠದ ಶ್ರೀ ಸೋಮಶೇಖರ ಸ್ವಾಮೀಜಿ ಮಾತನಾಡಿ, ಬೇಲೂರು ತಾಲ್ಲೂಕಿನ ಬಯಲುಸೀಮೆಗೆ ಸದ್ಯ ಎತ್ತಿನಹೊಳೆ, ರಣಘಟ್ಟ ನಂತರ ಯಗಚಿ ಏತ ನೀರಾವರಿ ಯೋಜನೆ ಕಾಯಕಲ್ಪವಾಗಿದೆ. ಆದರೆ ರಣಘಟ್ಟ ಯೋಜನೆ ತೀವ್ರ ವಿಳಂಬವಾಗುತ್ತಿದೆ. ಈ ಬಗ್ಗೆ ಸಂಬಂಧಿಸಿದ ಅಧಿಕಾರಿಗಳು ಗಮನ ಹರಿಸಬೇಕು. ಅಲ್ಲದೆ ಹಳೇಬೀಡು ಮತ್ತು ಮಾದೀಹಳ್ಳಿ ಹೋಬಳಿಗೆ ಹರಿಯುವ ಕಾಲುವೆ ಸ್ವಚ್ಚತೆಗೆ ಮುಂದಾಗಿ ಹೆಚ್.ಕೆ. ಸುರೇಶ್ ಅವರು ಬೇಲೂರು ಕ್ಷೇತ್ರಕ್ಕೆ ಶಾಸಕರ ಬಳಿಕ ಉತ್ತಮ ಮಳೆ ಬೆಳೆಯಾಗುತ್ತಿದೆ. ಅವರ ದೈವಭಕ್ತಿ ಹೀಗೆ ಇರಲಿ ಎಂದರು.


ರೈತ ಸಂಘದ ಮುಖಂಡ ಕುಮಾರ್, ಬಿಜೆಪಿ ಮಾಜಿ ಅಧ್ಯಕ್ಷ ಆನಂದ್, ಮುಖಂಡರಾದ ವಿಜಯಕುಮಾರ್, ಡಿಶಾಂತ್, ಸೋಮಣ್ಣ, ಪರಮೇಶ್, ಯಗಚಿ ನಿಗಮದ ಇಂಜಿನಿಯರ್ ದಯಾನಂದ, ಪ್ರವೀಣ್, ನವೀನ ಇತರರಿದ್ದರು.

# ದೇಶ ರಕ್ಷಣೆ ಪ್ರತಿ ನಾಗರಿಕರ ಹೊಣೆ: ರಂಗನಾಥ್

ಕನ್ನಡ ಪೋಸ್ಟ್ ನ್ಯೂಸ್ ನೆಟ್ವರ್ಕ್

ಬೇಲೂರು: ದೇಶದ ರಕ್ಷಣೆ ನಮ್ಮೆಲ್ಲರ ಹೊಣೆ ಆದರೆ ಗಡಿಯಲ್ಲಿ ನಮ್ಮ ಜೀವ ರಕ್ಷಣೆಗೆ ಹಗಲಿರುಳು ಶ್ರಮಿಸುವ ಯೋಧರ ಸೇವೆ ಗಣನೀಯವಾದುದು ಎಂದು ರೋಟರಿ ಕ್ಲಬ್ ಅಧ್ಯಕ್ಷ ಬಿ.ಎಂ. ರಂಗನಾಥ್ ಹೇಳಿದರು.

ಪಟ್ಟಣದ ರೋಟರಿ ಕ್ಲಬ್‌ನಲ್ಲಿ ಕಾರ್ಗಿಲ್ ವಿಜಯೋತ್ಸವ ಅಂಗವಾಗಿ ಆಯೋಜಿಸಿದ್ದ ನಿವೃತ್ತ ಯೋಧರಿಗೆ ಸನ್ಮಾನ ಸಮಾರಂಭದ ಅಧ್ಯಕ್ಷತೆ ವಹಿಸಿ ಮಾತನಾಡಿ, ದೇಶಕ್ಕಾಗಿ ಸರ್ವಸ್ವವನ್ನು ಅರ್ಪಿಸಿದ ಯೋಧರ ಆದರ್ಶಗಳು ಪ್ರತಿಯೊಬ್ಬರ ಬದುಕಿನ ಬೆಳಕಾಗಬೇಕು ಎಂದರು. ಸನ್ಮಾನ ಸ್ವೀಕರಿಸಿ ಮಾತನಾಡಿದ ನಿವೃತ್ತ ಯೋಧ ವೆಂಕಟೇಶ್ ಅವರು, ಮನೆ, ಕುಟುಂಬ ಸದಸ್ಯರಿಂದ ದೂರವಾಗಿದ್ದು ದೇಶ ರಕ್ಷಣೆಗೆ ಲಕ್ಷಾಂತರ ಯೋಧರು ಗಡಿಯಲ್ಲಿ ಕೆಲಸ ಮಾಡುತ್ತಿದ್ದಾರೆ. ಅವರ ಸೇವೆ, ತ್ಯಾಗವನ್ನು ಯುವಪೀಳಿಗೆ ನೆನೆಯುವಂತಾಗಬೇಕು ಮತ್ತು ಈಗಿನ ಯುವಕರು ಸೇನೆ ಸೇರಲು ಮುಂದೆ ಬರಬೇಕು. ಸೇನೆಯಲ್ಲಿ ಕೆಲಸ ಮಾಡುವ ಅವಕಾಶ ಸಿಕ್ಕಿದ್ದು ನನ್ನ ಪುಣ್ಯ. ಪ್ರಾಣವನ್ನು ಮುಡಿಪಾಗಿಟ್ಟು ದೇಶ ಕಾಯುವ ಯೋಧರಿಗೆ ನಮ್ಮ ಜನರು ಋಣಿಯಾಗಿರಬೇಕು ಎಂದು ಹೇಳಿದರು.





ರೋಟರಿ ಕ್ಲಬ್ ಕಾರ್ಯದರ್ಶಿ ಹೆಚ್.ಕೆ. ರಮೇಶ್, ರೋಟರಿ ಸಂಸ್ಥೆಯ ಬಿ.ಬಿ. ಶಿವರಾಜು, ಗಣೇಶ್, ಮುರುಳಿ, ಲೋಕೇಶ್, ಶಂಭುಗೌಡ, ಸಂದೇಶ್, ರಾಘವೇಂದ್ರ, ವಿಕ್ರಮ್ ಕೌರಿ, ಅಭಿಗೌಡ, ದಿಲೀಪ್, ಶಿವದೀಪ್, ರಘುಚರಣ್, ಜಯದೇವ್, ರಾಜೇಗೌಡ ಮತ್ತಿತರರಿದ್ದರು.

Printed, Published and Owned by Manjunatha B.R. and Printed at PAPPAS PRINT HOUSE, BEHIND DISTRICT STADIUM, M.G.ROAD,VIDYANAGAR, HASSAN, KARNATAKA-573201 and published at No. 150, BANAVASE, SAKALESHPURA TALLUK, HASSAN DISTRICT, KARNATAKA-573201. Editor: MANJU BANAVASE. Ph: 8762954248